ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 138 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 18–12–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 138 | RNI No: KARKAN/2023/88462 | KA/SK/CTA-874/2024-2026 | Chitradurga | Date: 18-12-2024 Wednesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಖಾಯಂ ಒತ್ತಾಯ 2
ರಾತ್ರಿ 1 ಗಂಟೆವರೆಗೂ ಅಧಿವೇಶನ: ದಶಕದ ಬಳಿಕ ದಾಖಲೆ 3
ಆಧುನಿಕ ಭಾರತದಲ್ಲಿ ಸ್ತ್ರೀವಾದ ಮತ್ತು ಶಿಕ್ಷಣ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಡಿ.18ರಂದು ಉಚಿತ ಆಯುಷ್ ಆರೋಗ್ಯ ತಪಾಸಣಾ ಶಿಬಿರ

» ಚಿತ್ರದುರ್ಗ



ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸಹಯೋಗದಲ್ಲಿ ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಇದೇ ಡಿ.18ರಂದು ಬೆಳಿಗ್ಗೆ 10.30 ರಿಂದ 3.30 ರವರೆಗೆಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶರು, ನ್ಯಾಯಾಂಗ ಇಲಾಖೆ ಸಿಬ್ಬಂದಿಗೆ ಉಚಿತ ಆಯುಷ್ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಈ ಶಿಬಿರದಲ್ಲಿ ಉಚಿತವಾಗಿ ಆರೋಗ್ಯ ತಪಾಸಣೆ ಮಾಡಿ, ಔಷಧಿಗಳನ್ನು ವಿತರಿಸಲಾಗುವುದು. ಆಯುಷ್ ತಜ್ಞ ವೈದ್ಯರು, ವೈದ್ಯಾಧಿಕಾರಿಗಳು, ಮಹಿಳಾ ವೈದ್ಯರು ವಿವಿಧ ಖಾಯಿಲೆಗಳಿಗೆ ತಪಾಸಣೆ ಮಾಡಿ ಆಯುರ್ವೇದ ಪದ್ಧತಿಯಲ್ಲಿ ಚಿಕಿತ್ಸೆ ನೀಡಲಿದ್ದಾರೆ. ಜಿಲ್ಲಾ ನ್ಯಾಯಾಧೀಶರಾದ ರೋಣ ವಾಸುದೇವ್ ಶಿಬಿರ ಉದ್ಘಾಟಿಸಲಿದ್ದು, ಈ ಶಿಬಿರದ ಪ್ರಯೋಜನವನ್ನು ಎಲ್ಲಾ ವಕೀಲರು, ಸಿಬ್ಬಂದಿಯವರು ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಚಂದ್ರಕಾಂತ್ ನಾಗಸಮುದ್ರ ತಿಳಿಸಿದ್ದಾರೆ.

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

2024–25ನೇ ಸಾಲಿಗೆ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ–ಕುರಿ ಸಾಕಾಣಿಕೆ ಹಾಗೂ ಸ್ವಾವಲಂಬಿ ಸಾರಥಿ–ಫುಡ್ ಕಾರ್ಟ್ ಯೋಜನೆಗಳಡಿ ನಿಗಮದ ವ್ಯಾಪಿಗೆ ಒಳಪಡುವ ಫಲಾಪೇಕ್ಷಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಡಿ.29 ರವರೆಗೆ ವಿಸ್ತರಿಸಲಾಗಿದೆ. ಸ್ವಯಂ ಉದ್ಯೋಗ ನೇರಸಾಲ ಯೋಜನೆಯಡಿ ಕುರಿ ಸಾಕಾಣಿಕೆ ಉದ್ದೇಶಕ್ಕಾಗಿ ಸಹಾಯಧನ ರೂ.50 ಸಾವಿರ ಹಾಗೂ ಸಾಲ ರೂ.50 ಸಾವಿರ ಸೇರಿ ಒಟ್ಟು ಘಟಕ ವೆಚ್ಚ 1 ಲಕ್ಷ ಮಂಜೂರು ಮಾಡಲಾಗುವುದು. ಸ್ವಾವಲಂಬಿ ಸಾರಥಿ–ಫುಡ್ ಕಾರ್ಟ್ ಯೋಜನೆಯಡಿ ಫುಡ್ ಕಾರ್ಟ್ ಉದ್ದೇಶಕ್ಕಾಗಿ ಜಿಲ್ಲಾ ಕೇಂದ್ರಗಳ ವ್ಯಾಪ್ತಿಯಲ್ಲಿ ಮಾತ್ರ ಬ್ಯಾಂಕುಗಳ ಸಹಯೋಗದೊಂದಿಗೆ ಯೋಜನೆ ಅನುಷ್ಠಾನಗೊಳಿಸಿ, ಸಾಲ ಮೊತ್ತಕ್ಕೆ ಶೇ.75ರಷ್ಟು ಅಥವಾ ಗರಿಷ್ಟ ರೂ.4 ಲಕ್ಷಗಳ ಸಹಾಯಧನ ಮಂಜೂರು ಮಾಡಲಾಗುವುದು. 2022–23 ಹಾಗೂ 2023–24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಎಂದು ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಎಂ.ತಿಮ್ಮರಾಯಪ್ಪ ತಿಳಿಸಿದ್ದಾರೆ.

### ರೈಲಿಗೆ ಸಿಲುಕಿ ವ್ಯಕ್ತಿ ಸಾವು: ವಾರಸುದಾರರ ಪತ್ತೆಗೆ ಮನವಿ

» ಚಿತ್ರದುರ್ಗ

ಜಿಲ್ಲೆಯ ಚಿತ್ರದುರ್ಗ ಮತ್ತು ಬಾಲೇನಹಳ್ಳಿ ರೈಲು ನಿಲ್ದಾಣಗಳ ಮಧ್ಯೆ ರೈಲ್ವೆ ಕಿಮೀ ನಂ 35/100–200ರ ರೈಲ್ವೆ ಹಳಿಗಳಲ್ಲಿ ಯಾವುದೋ ಚಲಿಸುವ ರೈಲುಗಾಡಿಗೆ ಸಿಲುಕಿ ಸುಮಾರು 25 ರಿಂದ 30 ವರ್ಷದ ಪುರುಷ ವ್ಯಕ್ತಿ ಮೃತಪಟ್ಟಿದ್ದು, ಈ ಕುರಿತು ಡಿ.16ರಂದು ದಾವಣಗೆರೆ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅನಾಮಧೇಯ ಮೃತ ವ್ಯಕ್ತಿಯು 5.6 ಅಡಿ ಎತ್ತರ, ಕೋಲು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ ಸು.3 ಇಂಚು ಬಿಳಿ ಮಿಶ್ರಿತ ಕಪ್ಪು ಕೂದಲು ಇವೆ. ಮೃತನು ತುಂಬು ತೋಳಿನ ಲೈಟ್ ಗ್ರೀನ್ ಶರ್ಟ್, ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್, ಕಪ್ಪು ಬಣ್ಣದ ಚಡ್ಡಿ, ಕಂದು ಬಣ್ಣದ ಬೆಲ್ಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ದಾವಣಗೆರೆ ರೈಲ್ವೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192–259643, 9480802123 ಅಥವಾ ಇ–ಮೇಲ್ davangererly@ksp.gov.in ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ. 080–22871291 ಗೆ ಸಂಪರ್ಕಿಸಬಹುದು ಎಂದು ದಾವಣಗೆರೆ ರೈಲ್ವೆ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಳ್ಳಕೆರೆ ಕ್ರೀಡಾಂಗಣ ನಿರ್ಮಾಣಕ್ಕೆ 7.60 ಕೋಟಿ ಬಿಡುಗಡೆಗೆ ರಘುಮೂರ್ತಿ ಒತ್ತಾಯ

» ಚಳ್ಳಕೆರೆ

ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಕ್ಷೇತ್ರದ ಹಲವಾರು ವಿಚಾರಗಳ ಬಗ್ಗೆ ಅಧಿವೇಶನದಲ್ಲಿ ಪ್ರಶ್ನಿಸುವ ಮೂಲಕ ಕ್ಷೇತ್ರದ ಅಭಿವೃದ್ಧಿಯ ಬಗ್ಗೆ ಅವರಿಗೆ ಇರುವ ವಿಶೇಷ ಕಾಳಜಿಯನ್ನು ತೋರಿದ್ದಾರೆ.

ಕಳೆದ ವಾರವಷ್ಟೇ ಬೆಳಗಾವಿ ಅಧಿವೇಶನದಲ್ಲಿ ನಗರದ ಯುಜಿಡಿ ಕಾಮಗಾರಿಗೆ 260 ಕೋಟಿ ಹಣ ಬಿಡುಗಡೆ ಮಾಡುವಂತೆ ಒತ್ತಾಯ ಪಡಿಸಿದ ಬೆನ್ನಹಿಂದೆಯೇ ಮತ್ತೊಮ್ಮೆ ಡಿಸೆಂಬರ್ 17ರ ಕಲಾಪದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಜವಾಬ್ದಾರಿ ಹೊತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನಗರದ ಪಾವಗಡ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ಕ್ರೀಡಾಂಗಣಕ್ಕೆ ಸುಮಾರು 7.60 ಕೋಟಿ ಹಣ ಬಿಡುಗಡೆ ಮಾಡುವಂತೆ ಅಧಿವೇಶನದಲ್ಲಿ ಮನವಿ ಮಾಡಿದ್ದಾರೆ.



ನಗರದ ಪಾವಗಡ ರಸ್ತೆಯ ರಿ, ಸರ್ವೆ ನಂ. 62ರಲ್ಲಿ 9.36 ಎಕರೆ ಜಮೀನಲ್ಲಿ 6 ಎಕರೆ ಪ್ರದೇಶದಲ್ಲಿ ಕ್ರೀಡಾಂಗಣವನ್ನು ನಿರ್ಮಿಸಲುಸಿದ್ದತೆನಡೆದಿದ್ದು,2016–17ನೇ ಸಾಲಿನಲ್ಲಿ 50 ಲಕ್ಷ ಬಿಡುಗಡೆಯಾಗಿತ್ತು. ಕೆಆರ್‌ಡಿಎಎಲ್ ವತಿಯಿಂದ ಕಾಮಗಾರಿ ಕೈಗೊಂಡು ಸದ್ಯದ ಸ್ಥಿತಿಯಲ್ಲಿ ಕ್ರೀಡಾಂಗಣದ ಸುತ್ತ ಬೇಲಿ ಹಾಕಲಾಗಿದೆ. ಉಳಿದಂತೆ ಬಾಸ್ಕಟ್‌ಬಾಲ್‌ಅಂಕಣ, ನೀರಿನ ಸೌಲಭ್ಯ, ಪ್ರೇಕ್ಷಕರ ಗ್ಯಾಲರಿ ಇನ್ನಿತರೆ ಸೌಲಭ್ಯಗಳನ್ನು ಒದಗಿಸಲು 7.60 ಕೋಟಿ ಹಣ ಬಿಡುಗಡೆಗೊಳಿಸಬೇಕೆಂದು ಮನವಿ ಮಾಡಿದ್ದಾರೆ. ಶಾಸಕರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಚಳ್ಳಕೆರೆ ನಗರದ ಪಾವಗಡ ರಸ್ತೆಯಲ್ಲಿ ಕ್ರೀಡಾಂಗಣ ಮಾಡುವ ಕುರಿತು ಈಗಾಗಲೇ 50 ಲಕ್ಷ ಹಣ ಬಿಡುಗಡೆ ಮಾಡಲಾಗಿದೆ. ಉಳಿದ ಹಣ ಬಿಡುಗಡೆಗೆ ಶಾಸಕರು ಒತ್ತಾಯಿಸಿದ್ದಾರೆ. ಸರ್ಕಾರದ ಆರ್ಥಿಕ ಸ್ಥಿತಿಗತಿ ನೋಡಿ ಹಣ ಬಿಡುಗಡೆಗೊಳಿಸುವ ಭರವಸೆಯನ್ನು ಮುಖ್ಯಮಂತ್ರಿಗಳು ನೀಡಿದರು. ಮುಖ್ಯಮಂತ್ರಿಗಳಿಂದ ಉತ್ತರ ಪಡೆದ ಶಾಸಕರು, ಚಳ್ಳಕೆರೆ ವಿಧಾನಸಭಾ ಕ್ಷೇತ್ರ ಪರಿಶಿಷ್ಟ ಪಂಗಡ ಕ್ಷೇತ್ರವಾಗಿದ್ದು, ಎಸ್‌ಸಿಎಸ್‌ಪಿ–ಟಿಎಸ್‌ಪಿ ಯೋಜನೆಯಡಿ ಹಣವನ್ನು ಕೂಡಲೇ ಬಿಡುಗಡೆಗೊಳಿಸಬೇಕಿದೆ. ಸುಮಾರು ಐದಾರು ವರ್ಷಗಳಿಂದ ಕಾಮಗಾರಿ ನಡೆಯದೆ ಕ್ರೀಡಾಪಟುಗಳಿಗೆ ತೊಂದರೆಯಾಗಿದೆ, ವಿಶೇಷವಾಗಿ ಚಳ್ಳಕೆರೆ ನಗರಕ್ಕೆ ಕ್ರೀಡಾಂಗಣದ ಅವಶ್ಯಕತೆ ಇದೆ. ಮಾನ್ಯ ಮುಖ್ಯಮಂತ್ರಿಗಳುಕ್ರೀಡಾಂಗಣ ನಿರ್ಮಾಣಕ್ಕೆ ಹಣವನ್ನು ತಪ್ಪದೆ ಬಿಡುಗಡೆಗೊಳಿಸುವಂತೆ ಒತ್ತಾಯಿಸಿದರು.

# ಕ್ಷಯರೋಗದ ಬಗೆಗಿನ ಭೀತಿಯನ್ನು ತ್ವರಿತವಾಗಿ ಕೊನೆಗಾಣಿಸೋಣ

» ಚಿತ್ರದುರ್ಗ

ಕ್ಷಯರೋಗದ ಬಗೆಗಿನ ಭೀತಿಯನ್ನು ತ್ವರಿತವಾಗಿ ಕೊನೆಗಾಣಿಸೋಣ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಹೇಳಿದರು.

ನಗರದ ವಿ.ಪಿ.ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಮಂಗಳವಾರ ಆರೋಗ್ಯ ಇಲಾಖೆ ವತಿಯಿಂದ ಜರುಗಿದ ಕ್ಷಯಮುಕ್ತ 100 ದಿನಗಳ ಅಭಿಯಾನದಲ್ಲಿ ಅವರು ಮಾತನಾಡಿದರು.

ಕ್ಷಯ ರೋಗವು ಭಾರತದ ಸಾರ್ವಜನಿಕ ಆರೋಗ್ಯಕ್ಕೆ ಅತಿ ದೊಡ್ಡ ತೊಂದರೆಗಳಲ್ಲಿ ಒಂದಾಗಿರುತ್ತದೆ. ಪ್ರತಿ ವರ್ಷ ವಿಶ್ವದಲ್ಲೇ ಅತಿ ಹೆಚ್ಚು ಜನ ಕ್ಷಯರೋಗಕ್ಕೆ ತುತ್ತಾಗುತ್ತಾರೆ. ಭಾರತವನ್ನು ಕ್ಷಯ ಮುಕ್ತಗೊಳಿಸಲು ಸಮುದಾಯವು ಒಗ್ಗೂಡಿ ಕೆಲಸ ಮಾಡಬೇಕಾಗಿದೆ. ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಾ ಟ್ಯೂಬರ್ ಕ್ಯುಲೋಸಿಸ್ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುತ್ತದೆ ಎಂದು ಹೇಳಿದರು. ಕ್ಷಯರೋಗಿಯು ಕೆಮ್ಮಿದಾಗ ಅಥವಾ ಸೀನಿದಾಗ ಹೊರಬರುವ ತುಂತುರು ರೋಗಾಣುಗಳು ಗಾಳಿಯ ಮೂಲಕ ಆರೋಗ್ಯವಂತ ವ್ಯಕ್ತಿಯ ಶ್ವಾಸಕೋಶ ಸೇರಿ ಸೋಂಕು ಉಂಟುಮಾಡುತ್ತದೆ. ಕ್ಷಯ ರೋಗಿಗಳು ಕೆಮ್ಮುವಾಗ ಹಾಗೂ ಸೀನುವಾಗ ಬಾಯಿ ಮತ್ತು ಮೂಗಿನ ಹತ್ತಿರ ಕರವಸ್ತ್ರ ಇಟ್ಟುಕೊಳ್ಳಬೇಕು. ರೋಗಿಯ ಕಫವನ್ನು ಮನಸ್ಸಿಗೆ ಬಂದ ಕಡೆ ಉಗಿಯಬಾರದು. ಕಫವನ್ನು ಡಬ್ಬಿಯಲ್ಲಿ ಶೇಖರಿಸಿ ಗುಂಡಿ ತೋಡಿ ಮುಚ್ಚಬೇಕು ಎಂದು ಸಲಹೆ ನೀಡಿದರು.



ನಿಮ್ಮ ಮನೆಯಲ್ಲಿ ಹಾಗೂ ಸುತ್ತಮುತ್ತಲಿನವರಲ್ಲಿ ಕ್ಷಯರೋಗದ ಲಕ್ಷಣಗಳು ಉಳ್ಳುವವರನ್ನು ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಪರೀಕ್ಷೆಗಾಗಿ ಕಳುಹಿಸಬೇಕು. ಕ್ಷಯರೋಗವನ್ನು ಬೇಗ ಪತ್ತೆ ಹಚ್ಚಿ, ಪೌಷ್ಟಿಕ ಆಹಾರ ಸೇವಿಸಿ, ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಿ. ಕ್ಷಯಮುಕ್ತ ನೂರು ದಿನಗಳ ಅಭಿಯಾನ ಈಗಾಗಲೇ ಡಿ.07 ರಿಂದ ಪ್ರಾರಂಭವಾಗಿದ್ದು, 2025ರ ಮಾರ್ಚ್ 24 ರವರೆಗೆ ಎಲ್ಲಾ ಆಯುಷ್ಮಾನ್ ಆರೋಗ್ಯ ಮಂದಿರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ಎಲ್ಲಾ ಗ್ರಾಮಗಳ ಮನೆಗಳಲ್ಲಿ ಸಮೀಕ್ಷೆ ನಡೆಸಲಾಗುವುದು ಎಂದು ಹೇಳಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ ಹಾಗೂ ಬಿ.ಜಾನಕಿ ಟಿಬಿ ಜಾಗೃತಿ ಗೀತೆಗಳನ್ನು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಎನ್.ಸುರೇಶ್, ಸಹಶಿಕ್ಷಕರಾದ ಸುಕನ್ಯಾ, ಲಕ್ಷ್ಮೀದೇವಿ, ಸರಸ್ವತಿ, ಅಶಪುಲ್ಲ, ಅಪ್ಸಾನ ಬಾನು, ಅಮೀನಾ, ಮಾರುತಿ ನಗರ ಆರೋಗ್ಯ ಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಭಾಗ್ಯಲಕ್ಷ್ಮಿ, ತಾಲೂಕ ಆಶಾ ಬೋಧಕಿ ತಬಿತಾ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ನಗರ ಟಿಬಿ ಚಿಕಿತ್ಸಾ ಮೇಲ್ವಿಚಾರಕ ಸಂತೋಷ್, ಯೋಗ ಶಿಕ್ಷಕ ರವಿ ಅಂಬೇಕರ್ ಇದ್ದರು.

## ಎತ್ತಿನಗಾಡಿಗೆ ಡಿಕ್ಕಿ ಹೊಡೆದ ಲಾರಿ: ಸ್ಥಳದಲ್ಲೇ ಮೃತಪಟ್ಟ ಮಹಿಳೆ, ಎತ್ತು



» ಚಳ್ಳಕೆರೆ

ರಾಷ್ಟ್ರೀಯ ಹೆದ್ದಾರಿ(150ಎ)ಸಾಣೀಕೆರೆ ಬಳಿ ಎತ್ತಿನ ಗಾಡಿಗೆ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮವಾಗಿ ಗಾಡಿಯಲ್ಲಿದ್ದ ಸಾಣಿಕೆರೆ ಹೆಂಜಮ್ಮ(46) ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಆಕೆಯ ಪತಿ ದೊಡ್ಡಪ್ಪ(50) ತೀವ್ರವಾಗಿ ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸಾಣೀಕೆರೆ ಗ್ರಾಮದ ಕಲ್ಲುಗುಡ್ಡೆಗೊಲ್ಲರಹಟ್ಟಿಯ ನಿವಾಸಿಗಳಾದ ದೊಡ್ಡಪ್ಪ, ಆತನ ಪತ್ನಿ ಹೆಂಜಮ್ಮ ತಮ್ಮ ಟೈಯರ್‌ನ ಎತ್ತಿನ ಗಾಡಿಯಲ್ಲಿ ಜಮೀನಿಗೆ ಹೋಗಿ ಸಂಜೆ ವಾಪಾಸ್ ಆಗುವಾಗ ಸಂದರ್ಭದಲ್ಲಿ ಗಾಡಿಯಲ್ಲಿ ಹುಲ್ಲು ಹಾಕಿಕೊಂಡು ರಾಷ್ಟ್ರೀಯ ಹೆದ್ದಾರಿಗೆ ಎತ್ತಿನಗಾಡಿ ಆಗಮಿಸಿದ ಕೂಡಲೇ ಹಿರಿಯೂರು ಕಡೆಗೆ ಹೋಗುತ್ತಿದ್ದ ಐಶರ್ ಲಾರಿ ಹಿಂಬದಿಯಿಂದ ಎತ್ತಿನ ಗಾಡಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಗಾಡಿ ಪುಡಿಪುಡಿಯಾಗಿ ಒಂದು ಎತ್ತು ಸ್ಥಳದಲ್ಲೇ ಮೃತಪಟ್ಟು, ಮತ್ತೊಂದು ಎತ್ತಿಗೂ ರಕ್ತಗಾಯವಾಗಿದೆ.

ಪುಟ ↘ 2

## ಪ್ರಮುಖ ಸುದ್ದಿ

# ನಾವು ಮಾಡುವ ಸತ್ಕರ್ಮಗಳು ಸಾಧನೆಯ ಪಥವಾಗಿರುತ್ತವೆ

» ಹೊಸದುರ್ಗ



ಆಧ್ಯಾತ್ಮಿಕ ಸಾಧನೆಗಳ ಮೂಲಕ ಬದುಕನ್ನು ಹಸನುಗೊಳಿಸಬೇಕು. ನಾವು ಮಾಡುವ ಸತ್ಕರ್ಮಗಳು ಸಾಧನೆಯ ಪಥವಾಗಿರುತ್ತವೆ. ಎಲ್ಲದಕ್ಕೂ ಮೂಲ ಪ್ರೀತಿ. ಪ್ರೀತಿಯಿದ್ದರೆ ಎಲ್ಲಾ ಒಂದಾಗುತ್ತಾರೆ ಎಂದು ಧಾರವಾಡ ಮನಗುಂಡಿ ಶ್ರೀ ಗುರು ಬಸವ ಮಹಾಮನೆಯ ಶ್ರೀ ಬಸವಾನಂದಸ್ವಾಮೀಜಿ ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿರುವ ಶ್ರೀ ಸದ್ಗುರು ಆಶ್ರಮದ ವತಿಯಿಂದ ಶ್ರೀ ಸದ್ಗುರು ಸೇವಾಶ್ರಮದಲ್ಲಿ ಸೋಮವಾರ ನಡೆದ 22ನೇ ವರ್ಷದ ಶ್ರೀ ದತ್ತಜಯಂತಿ ಮಹೋತ್ಸವದ ಮೂರನೇ ದಿನದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದರು.

ಮನುಷ್ಯನ ರೂಪ ಧರಿಸಿ, ಮೃಗಗಳ ರೀತಿ ವರ್ತಿಸಬಾರದು, ಅಜ್ಞಾನ ಹೋಗಿ ಪ್ರತಿಯೊಬ್ಬಲ್ಲೂ ಸಹಾ ಸುಜ್ಞಾನ ಬರಬೇಕಿದೆ, ಇಂದು ಜ್ಞಾನಿಯಲ್ಲೂ ಕೂಡ ದೋಷ ಹುಡುಕುವರಿದ್ದಾರೆ ಎಂಬ ವಷಾದ ವ್ಯಕ್ತಪಡಿಸಿದ ಸ್ರೀಗಳು ನಮಗೆ ಸಮಯ ಪ್ರಜ್ಞೆ ಮತು ಸಮಾಜದ ಪ್ರಜ್ಞೆ ಇರುವುದು ಅತ್ಯಂತ ಮುಖ್ಯ

ಜಗತ್ತಿನಲ್ಲಿ ಭಗವಂತನ ಅನುಗ್ರಹವಿಲ್ಲದಿದ್ದರೆ, ಮನುಷ್ಯತ್ವ, ಮೋಕ್ಷತ್ವ, ಪಡೆಯಲಾಗದು. ಸದ್ಗುರುವಿನ ಸೇವೆ ಸಿಕ್ಕಿದೆ ಸಾರ್ಥಕಪಡಿಸಿಕೊಳ್ಳಿ

ಮುಕ್ತಿ, ಮೋಕ್ಷ, ಕೈವಲ್ಯ, ಮುಕ್ತಿ ಮೋಕ್ಷಕ್ಕೆ ಪ್ರಯತ್ನ ಪಡಬೇಕು ಎಂದರು.

ಶ್ರೀ ಸದ್ಗುರು ಸೇವಾಶ್ರಮದ ಸಂಸ್ಥಾಪಕರಾದ ಶ್ರೀಕಾಂತಾನಂದ ಗುರೂಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಮಂಗಳೂರು ಅಭಿಜ್ಞಾನ ಟ್ರಸ್ಟ್ ಅಧ್ಯಕ್ಷರಾದ ಶ್ರೀ ಪ್ರಸಾದ್‌ಗುರೂಜಿ, ಶಿವಮೊಗ್ಗದ ಬ್ರಹ್ಮಾನಂದ ತೀರ್ಥಭಿಕ್ಷು ಸ್ವಾಮೀಜಿ,ಶ್ರೀ ವಿನಿಯಾನಂದ ಸ್ವಾಮೀಜಿ ಆಶೀರ್ವಾಚನ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಕಾಂತಾನಂದ ಗುರೂಜಿ ಅವರ ಮಾತಾ ಪಿತೃಗಳಾದ ಡಾ:ರವೀಂದ್ರ, ಶ್ರೀಮತಿಅಂಬಿಕಾರವೀಂದ್ರ, ಆಶ್ರಮದ ಸದ್ಭಕ್ತರಾದ ರಮಸ್ವಾಮಿ, ಸಂದೇಶ್, ಅಟೋ ರಘು, ಡಿ.ಎಂ. ಮಂಜುನಾಥ್, ಉಮೇಶ್‌ಬಾಬು, ಗಂಗಾಧರ್, ಮಹೇಶ್ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು. ಕಾರ್ಯಕ್ರಮದ ನಂತರ ಸಂಜೆ ಶ್ರೀ ಸಾಯಿಬಾಬ ಮಂದಿರದಿಂದ ಶ್ರೀ ಸದ್ಗುರು ಸೇವಾಶ್ರಮದವರೆಗೆ "ಶೋಭಯಾತ್ರೆ" ನಡೆಯಿತು. ಇದೇ ದಿನ ಬೆಳಿಗ್ಗೆ ಎಂ.ಕೆ.ಪ್ರಕಾಶ್ ಅವರ ಮನೆಯಿಂದ ನಗರ ಸಂಕೀರ್ತನೆ ನಂತರ ಅಷ್ಟಾಕರಿಹೋಮ, ಹೊಸದುರ್ಗ ದೈವಜ್ಞಾ ಬ್ರಾಹ್ಮಣ ಭಜನಾ ಮಂಡಳಿಯವರಿಂದ ಭಜನಾ ಕಾರ್ಯಕ್ರಮ, ನಿರಂತರ ಅನ್ನಸಂತರ್ಪಣೆ ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು.

## ಫಾಸ್ಟ್ ನ್ಯೂಸ್

### ಎತ್ತಿನಗಾಡಿಗೆ ಡಿಕ್ಕಿ ಹೊಡೆದ ಲಾರಿ: ಸ್ಥಳದಲ್ಲೇ ಮೃತಪಟ್ಟ ಮಹಿಳೆ, ಎತ್ತು

» ಮೊದಲ ಪುಟದಿಂದ

ಗಾಡಿಯಲ್ಲಿ ಪ್ರಯಾಣಿಸುತ್ತಿದ್ದ ಹೆಂಜಮ್ಮ ತಲೆಗೆ ಪೆಟ್ಟುಬಿದ್ದು ಸ್ಥಳದಲ್ಲೇ ಮೃತಪಟ್ಟಿರುತ್ತಾಳೆ. ಸುದ್ದಿತಿಳಿದ ಸ್ಥಳೀಯರು, ಸಂಬಂಧಿಕರು ಸ್ಥಳಕ್ಕೆ ದಾವಿಸಿದ್ದಾರೆ. ಹೆಂಜಮ್ಮಳ ಪುತ್ರಿ ತಾಯಿಯ ಶವವನ್ನು ತೊಡೆಮೇಲೆ ಹಾಕಿಕೊಂಡು ರೋಧಿಸುತ್ತಿದ್ದ ದೃಶ್ಯ ಮನಕಲಕುವಂತಿತ್ತು. ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಮತ್ತು ಸಿಬ್ಬಂದಿ ವರ್ಗ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತದಲ್ಲಿ ಲಾರಿಚಾಲಕ ಗಾಯಗೊಂಡಿದ್ದಾನೆ. ಪೊಲೀಸ್‌ರು ಪ್ರಕರಣ ದಾಖಲಿಸಿದ್ದಾರೆ.

### ಎಸ್.ನಾಗರಾಜ್ ನಿಧನ

» ಚಿತ್ರದುರ್ಗ

ತಾಲ್ಲೂಕಿನ ಹಂಪಯ್ಯನ ಮಾಳಿಗೆ ಗೊಲ್ಲರಹಟ್ಟಿಯ ನಿವೃತ ಅರಣ್ಯ ಇಲಾಖೆಯ ನೌಕರರಾದ ಎಸ್.ನಾಗರಾಜ್ (64) ರವರು ಇಂದು ಬೆಳಿಗ್ಗೆ 7.30ಕ್ಕೆ ನಿಧನರಾಗಿದ್ದಾರೆ. ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿಯನ್ನು ಸೇರಿದಂತೆ ಆಪಾರವಾದ ಬಂಧು ಬಳಗವನ್ನು ಆಗಲಿದ್ದಾರೆ. ಇವರ ಆತ್ಮಕ್ಕೆ ಶಾಂತಿ ಸಿಗಲಿ ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ಆ ಭಗವಂತ ನೀಡಲಿ ಎಂದು ಕ್ಷೇಮಾಭಿವೃದ್ಧಿ ನೌಕರರ ಸಂಘದ ಅಧ್ಯಕ್ಷರಾದ ನಾಗರಾಜ್ ಸಂಗಮ್ ಸಂತಾಪ ಸೂಚಿಸಿದ್ದಾರೆ. ಇವರು ತಮ್ಮ ಸೇವಾವಧಿಯಲ್ಲಿ ಹಾಕಿದ ಸಸಿಗಳು ಇಂದು ಹೆಮ್ಮರವಾಗಿ ಬೆಳದಿವೆ, ಹಲಾವರು ಜನರಿಗೆ, ಪಕ್ಷಿಗಳಿಗೆ ಆಶ್ರಯವನ್ನು ನೀಡಿದೆ.

### ಡಿ.20ರಂದು ಪೂರ್ವ ಸಭೆ

» ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಮಹನೀಯರ ಜಯಂತಿ ಆಚರಣೆ ಸಂಬಂಧ ಇದೇ ಡಿ.20ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ಡಿ.29ರಂದು ವಿಶ್ವಮಾನವ ದಿನಾಚರಣೆ ಆಚರಿಸುವ ಕುರಿತಂತೆ ಡಿ.20ರಂದು ಮಧ್ಯಾಹ್ನ 12ಕ್ಕೆ ಪೂರ್ವಭಾವಿ ಸಭೆ ಹಾಗೂ 2025ರ ಜನವರಿ 01ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಆಚರಿಸುವ ಸಂಬಂಧ ಡಿ.20ರಂದು ಮಧ್ಯಾಹ್ನ 12.30ಕ್ಕೆ ಪೂರ್ವಭಾವಿ ಸಭೆ ನಡೆಯಲಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಇಂದು ಬರಹ ಚಿಂತನ, ಕವಿ-ಕಾವ್ಯ ಸಂವಾದ

» ಹೊಸದುರ್ಗ

ಹೊಸದುರ್ಗದ ಹೆಜ್ಜೆಸಾಲು ಒಂದು ಸಾಂಸ್ಕೃತಿಕ ವೇದಿಕೆ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು,ಹೊಸದುರ್ಗ ಹಾಗೂ ಐ ಕ್ಯೂ ,ಎ. ಸಿ ಹೊಸದುರ್ಗ ಇವರ ಸಹಯೊಗದಲ್ಲಿ ಖ್ಯಾತ ಕವಿಗಳಾದ ಎಸ್.ಜಿ.ಸಿದ್ದರಾಮಯ್ಯ ನವರ ಬರಹ ಚಿಂತನ , ಕವಿ – ಕಾವ್ಯ ಸಂವಾದ ಕಾರ್ಯಕ್ರಮವನ್ನು ಡಿ.18 ರಂದು ಬುಧವಾರ ಬೆಳಿಗ್ಗೆ ಸಮಯ 10 – 30 ಕ್ಕೆ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಹೆಜ್ಜೆಸಾಲು ಒಂದು ಸಾಂಸ್ಕೃತಿಕ ವೇದಿಕೆ ಯ ಅಧ್ಯಕ್ಷ ಗೋ.ತಿಪ್ಪೇಶ್ ತಿಳಿಸಿದ್ದಾರೆ. ಸಾಣೆಹಳ್ಳಿ ಮಠದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರು ಕಾರ್ಯಕ್ರಮದ ಉದ್ಘಾಟನೆಯನ್ನ ನೆರವೇರಿಸಲಿದ್ದು ಕಾಲೇಜಿನ ಪ್ರಾಂಶುಪಾಲರಾದ ಜಿ.ಎಸ್. ಅಶ್ವಥ್‌ಯಾದವ್ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಾಸ್ತಾವಿಕವಾಗಿ ವೇದಿಕೆ ಅಧ್ಯಕ್ಷ ಗೋ ತಿಪ್ಪೇಶ್ ಮಾತನಾಡಲಿದ್ದು ಕವನಗಳ ವಿಮರ್ಶೆಯನ್ನು ಖ್ಯಾತ ಕವಿ ಪ್ರೋ. ಚಂದ್ರಶೇಖರತಾಳ್ಯ ಮತ್ತು ಕವಿಯಿತ್ರಿ ತಾರಿಣಿ ಶುಭದಾಯಿಣಿ ಇವರು ನಡೆಸಲಿಕೊಡಲಿದ್ದು ನಂತರ ನಡೆಯಲಿರುವ ಸಂವಾದ ಕಾರ್ಯಕ್ರಮದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಬಿಳಿಗೆರೆ ಕೃಷ್ಣಮೂರ್ತಿ, ಚಿಂತಕ ಮಂಜುನಾಥ್‌ಮಾಗೋದಿ ಭಾಗವಹಿಸುವರು, ಕವಿಗಳಾದ ಪಿ.ಎಲ್.ಲೋಕೇಶ್ವರ್, ನಿಸಾರ್ ಅಹಮದ್, ಕುಮಾರಿ ಎಂ.ಆರ್.ನಳಿನ ಧನಂಜಯ ಮೆಂಗಸಂದ್ರ, ನಾಗತಿಹಳ್ಳಿಮಂಜುನಾಥ್, ಕಲಾವಿದ ಪೀಲಾಪುರ ಕಂಠೇಶ್, ಸುಹಾನ್ ಇಸ್ಮಾಯಿಲ್, ಕೈನಡು ಚಂದ್ರಪ್ಪ, ರಂಗೈನೂರು ಪ್ರಭು, ಗಣ್ಯರಾದ ಮಹಮ್ಮದ್ ಇಸ್ಮಾಯಿಲ್, ಕೆ.ಸಿ.ನಿಂಗಪ್ಪ, ,ಆಗ್ರೋ. ಹೆಚ್, ಶಿವಣ್ಣ ,ಡಿ.ಆರ್.ನಾಗೇಶಪ್ಪ.. ದೀಪಿಕಾ ಸತೀಶ್ , ನಿವೃತ್ತ ಶಿಕ್ಷಕ ರಾಜಪ್ಪ, ಜಿ.ವಿ.ಟಿ.ವಿ.ರಾಘು ಇನ್ನು ಮುಂತಾದವರು ಭಾಗವಹಿಸಲಿದ್ದಾರೆ.

### ಚಲನ ಚಿತ್ರ ವಾಣಿಜ್ಯ ಮಂಡಆಗೆ ಬಿ.ವಿ.ಕುಶಕುಮಾರ್ ಆಯ್ಕೆ

» ಹೊಸದುರ್ಗ

ಪಟ್ಟಣದ ಜ್ಯೋತಿ ಚಿತ್ರ ಮಂದಿರದ ಆಡಳಿತ ಪಾಲುದಾರರಾದ ಬಿ.ವಿ.ಕುಶಕುಮಾರ್ ಕರ್ನಾಟಕ ಚಲನ ಚಿತ್ರ ವಾಣಿಜ್ಯ ಮಂಡಳಿಗೆ ನಿರ್ಧೇಶಕರಾಗಿ ಆಯ್ಕೆಯಾಗಿದ್ದಾರೆ, 2024–25 ನೇ ಸಾಲಿಗೆ ಬೆಂಗಳೂರಿನ ಕರ್ನಾಟಕ ಫಿಲಂ ಚೇಂಬರ್‌ನಲ್ಲಿ ಚುನಾವಣೆ ಪ್ರಕ್ರಿಯೆ ನಡೆದಿದ್ದು ಪ್ರದರ್ಶಕರ ವಲಯದಿಂದ ಹೊಸದುರ್ಗದ ಬಿ.ವಿ.ಕುಶಕುಮಾರ್ ಸ್ಪರ್ಧಿಸಿದ್ದರು.

# ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಖಾಯಂ ಒತ್ತಾಯ

» ಚಿತ್ರದುರ್ಗ

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಖಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸಿ.ಐ.ಟಿ.ಯು.ವತಿಯಿಂದ ಜಿಲ್ಲಾ ಪಂಚಾಯಿತಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ಭಾರತಿ ಆರ್.ಬಣಕಾರ್‌ರವರ ಮೂಲಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಯಿತು.





ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಜಿಲ್ಲಾ ಪಂಚಾಯಿತಿಗೆ ತೆರಳಿದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಡಿ.ಎಂ.ಮಲಿಯಪ್ಪ ಪ್ರತಿಭಟನೆ ಯನ್ನುದ್ದೇಶಿಸಿ ಮಾತನಾಡುತ್ತ ಗುಜರಾತ್ ಹೈಕೋರ್ಟ್ ತೀರ್ಪಿನಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ವರ್ಗ–3 ಮತ್ತು 4 ಎಂದು ಪರಿಗಣಿಸಿ ಸೇವೆ ಖಾಯಂಗೊಳಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಬಿಸಿಯೂಟ ಹಾಗೂ ಆಶಾ ಕಾರ್ಯಕರ್ತೆಯರಿಗೆ 2018 ರಿಂದ ಕೇಂದ್ರ ಸರ್ಕಾರ ಗೌರವ ಧನ ಹೆಚ್ಚಳ ಮಾಡಿಲ್ಲ. ಯಾವುದೇ ಜೀವನ ಭದ್ರತೆಯಿಲ್ಲದೆ ದುಡಿಯುತ್ತಿದ್ದಾರೆ. ಮಾಸಿಕ ಗೌರವ ಧನ 26 ಸಾವಿರ ರೂ.ಗಳಿಗೆ ಹೆಚ್ಚಿಸಬೇಕೆಂದು ಒತ್ತಾಯಿಸಿದರು.ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ರಾಜ್ಯ ಸರ್ಕಾರ ಘೋಷಿಸಿದಂತೆ ಹದಿನೈದು ಸಾವಿರ ರೂ.ಗಳಿಗೆ ಗೌರವ ಧನ ಹೆಚ್ಚಿಸಬೇಕು. ನಿವೃತ್ತಿಯಾದವರಿಗೆ ಇಡಿಗಂಟು ಮಾಸಿಕ ಹತ್ತು ಸಾವಿರ ರೂ.ಪಿಂಚಣಿ ನೀಡಬೇಕು. ಶಿಕ್ಷಣ ಇಲಾಖೆ ಎಸ್.ಡಿ.ಎಂ.ಸಿ.ಗಳಿಂದ ಪ್ರಾರಂಭಿಸಿರುವ ಎಲ್.ಕೆ.ಜಿ. ಯು.ಕೆ.ಜಿ. ನಿಲ್ಲಿಸಿ ಎಲ್ಲಾ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಅಂಗನವಾಡಿ ಕೇಂದ್ರಗಳಲ್ಲಿಯೇ ಎಲ್.ಕೆ.ಜಿ. ಯು.ಕೆ.ಜಿ. ತೆರೆಯಬೇಕು. ಐ.ಸಿ.ಡಿ.ಎಸ್.ಯೋಜನೆಗೆ ಪ್ರತ್ಯೇಕನಿರ್ದೇಶನಾಲಯಬೇಕು.ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಿರುವ ನರೇಂದ್ರಮೋದಿಗೆ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಬಿಸಿಯೂಟ, ಆಶಾ ಕಾರ್ಯಕರ್ತೆಯರ ಕಷ್ಟ ಗೊತ್ತಾಗುವುದಿಲ್ಲ. ಅವರೇನಿದ್ದರೂ ಅದಾನಿ, ಅಂಬಾನಿ ಪರವಾಗಿದ್ದಾರೆ. ಉದ್ಯಮಿಗಳಿಗೆ ಲಕ್ಷಾಂತರ ಕೋಟಿ ರೂ. ಗಳ ಸಾಲ ಮನ್ನ ಮಾಡಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.ಸಿ.ಐ.ಟಿ.ಯು. ಸಹ ಸಂಚಾಲಕ ಸಿ.ಕೆ.ಗೌಸ್‌ಪೀರ್ ಮಾತನಾಡಿ ಹಲವಾರು ವರ್ಷಗಳಿಂದಲೂ ಅಂಗನವಾಡಿಕಾರ್ಯಕರ್ತೆಯರುಹಾಗೂ ಸಹಾಯಕಿಯರು ತಮ್ಮ ಬೇಡಿಕೆಗಳಿಗಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದರೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸ್ಪಂದಿಸುತ್ತಿಲ್ಲ. ಅಂಗನವಾಡಿ ಕೇಂದ್ರಗಳಿಗೆ ಕೊಡುವ ಪೌಷ್ಟಿಕಾಂಶ ಆಹಾರಕ್ಕೆ ಜಿ.ಎಸ್.ಟಿ. ವಿಧಿಸಬಾರದು. ಘಟಕ ವೆಚ್ಚ ಹೆಚ್ಚಳ ಮಾಡಿ ಮೊದಲಿನಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮೆನು ಅಂತಿಮಗೊಳಿಸುವ ವ್ಯವಸ್ಥೆಯಾಗಬೇಕು. ಮೂರು ತಿಂಗಳೊಳಗೆ ಖಾಲಿ ಹುದ್ದೆಗಳನ್ನು ನೇಮಿಸಬೇಕು. ಇಲ್ಲವಾದಲ್ಲಿ ಅಧಿಕಾವದಿ ವೇತನ ನೀಡಬೇಕು. ಮಿನಿ ಅಂಗನವಾಡಿ ಕೇಂದ್ರಗಳನ್ನು ಪೂರ್ಣ ಕೇಂದ್ರಗಳನ್ನಾಗಿ ಪರಿವರ್ತಿಸುವತನಕ ಸಹಾಯಕಿಯರ ನೇಮಕವಾಗಬೇಕು. ಮುಂಗಡವಾಗಿ ಕರೆನ್ಸಿ ಹಣ, ಕೋಳಿ ಮೊಟ್ಟೆ, ಬಾಡಿಗೆ, ಅಡುಗೆ ಅನಿಲ, ತರಕಾರಿ, ಕಾಂಟೆಜೆನ್ಸಿ ಬಿಲ್‌ಗಳನ್ನು ಹಾಕದೆ ಫಲಿತಾಂಶ ಕೇಳಬಾರದೆಂದು ಆಗ್ರಹಿಸಿದರು. ಅಂಗನವಾಡಿ ಕೇಂದ್ರಗಳಲ್ಲಿ ಮೊಬೈಲ್‌ನಲ್ಲಿ ದಾಖಲೆ ನಿರ್ವಹಿಸುತ್ತಿರುವುದರಿಂದ ದಾಖಲಾತಿ ಬರೆಸುವ ಸಂಖ್ಯೆ ಕಡಿಮೆ ಮಾಡುವಂತೆ ಮನವಿ ಮಾಡಿದರು.

ಇಂದಿರಮ್ಮ, ಜೆ.ಎನ್.ಗಂಗಮ್ಮ, ಬಿ.ಬೋರಮ್ಮ, ನಿರ್ಮಲ, ಆಶಾರಾಣಿ, ಮಂಜುಳ, ಕಮಲ, ಎಸ್.ಕಲ್ಯಾಣಮ್ಮ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ನಕಲಿ ಸಂಘಟಕರಿಂದ ದೇಣಿಗೆ ಸಂಗ್ರಹ, ಬೋಗಸ್ ಕಾರ್ಡುಗಳ ಹಂಚಿಕೆ

» ದಾವಣಗೆರೆ

ನಗರದಲ್ಲಿ ಮತ್ತು ಜಿಲ್ಲೆಯಾದ್ಯಂತ ಹಲವಾರು ಸಂಘಟನೆಗಳು ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಸೌಲಭ್ಯಗಳನ್ನು ಕೊಡಿಸುತ್ತೇವೆ ಎಂದು ಆಸೆ, ಆಮಿಷಗಳನ್ನು ತೋರಿಸಿ ನೈಜ ಕಟ್ಟಡ ಕಾರ್ಮಿಕರು ಅಲ್ಲದವರಿಗೂ ಕಟ್ಟಡ ನಿರ್ಮಾಣ ಕಾರ್ಮಿಕರ ಗುರುತಿನ ಕಾರ್ಡನ್ನು ಮಾಡಿಕೊಡುತ್ತಿರುವುದಲ್ಲದೇ, ಕಟ್ಟಡ ನಿರ್ಮಾಣ ಕಾಮಗಾರಿಗೆ ಬೇಕಾಗುವ ಸಾಮಾಗ್ರಿಗಳ ಮಾರಾಟ ಮಳಿಗೆಗಳಿಗೆ ತೆರಳಿ ವಂತಿಗೆ ವಸೂಲಿ ಮಾಡುತ್ತಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಎಐಟಿಯುಸಿ ನೇತೃತ್ವದ ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ರಾಜ್ಯ ಸಮಿತಿ ಹಾಗೂ ದಾವಣಗೆರೆ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಪತ್ರಿಕಾ ಹೇಳಿಕೆ ನೀಡಿದ್ದಾರೆ.ನಕಲೀ ಕಟ್ಟಡ ಕಾರ್ಮಿಕರ ಕಾರ್ಡುಗಳನ್ನು ಮಾಡಿಸುವ ಮೂಲಕ ಕಟ್ಟಡ ಕಾರ್ಮಿಕರಲ್ಲದವರಿಗೂ ಸರ್ಕಾರಿ ಸವಲತ್ತುಗಳನ್ನು ನೀಡುವ ಯತ್ನ ಮಾಡುತ್ತಿದ್ದಾರೆ. ಇದಲ್ಲದೇ ಕಾರ್ಮಿಕರ ಗುರುತಿನ ಕಾರ್ಡನ್ನು ಮಾಡಿ ಕೊಡುವುದರ ಜೊತೆಗೆ ಒಂದು ಕಾರ್ಡ್‌ಗೆ 500 ರೂ.ಗಳಿಂದ ರೂ.1000ವರೆಗೂ ಅಮಾಯಕ ಜನರಿಂದ ವಸೂಲಿ ಮಾಡುತ್ತಿದ್ದಾರೆ ಎನ್ನುವ ಮಾಹಿತಿ ನಮ್ಮ ಸಂಘಟನೆಯ ಗಮನಕ್ಕೆ ಬಂದಿದೆ ಎಂದಿದ್ದಾರೆ.





ಈ ಮೂಲಕ ಕಟ್ಟಡ ಕಾರ್ಮಿಕರಾಗಲೀ, ದಾವಣಗೆರೆ ಜಿಲ್ಲಾಯ ನಾಗರೀಕರಾಗಲೀ ಬೋಗಸ್ ಕಾರ್ಡುಗಳನ್ನು ಮಾಡಿಕೊಡುವ ಸಂಘಟನೆಗಳಿಗೆ ಯಾವುದೇ ಹೆಚ್ಚಿನ ಹಣ ನೀಡದೇ ನಮ್ಮ ಸಂಘಟನೆಯ ಕಚೇರಿಗೆ ದಾಖಲೆಗಳನ್ನು ನೀಡುವ ಮೂಲಕ ಕಾರ್ಮಿಕ ಇಲಾಖೆಯಿಂದ ನೀಡಲಾಗುವ ಗುರುತಿನ ಚೀಟಿಗಳನ್ನು ಪಡೆಯುವಂತೆ ಮನವಿ ಮಾಡಿದ್ದಾರೆ.

ನಮ್ಮ ಸಂಘಟನೆಯ ಮುಖ್ಯ ಕಚೇರಿ ಕಾಮ್ರೇಡ್ ಪಂಪಾಪತಿ ಭವನ, ಅಶೋಕ ರಸ್ತೆ, ದಾವಣಗೆರೆ, ಇಲ್ಲಿ ಇದ್ದು, ಚನ್ನಗಿರಿಯ ಸಂತೆ ಮೈದಾನದ ಸಿಡಿಪಿಓ ಆಫೀಸ್ ಪಕ್ಕದಲ್ಲಿ ಇರುತ್ತದೆ. ಹರಿಹರ ಸಮೀಪದ ಹಂಸಾಗರ ಬಡಾವಣೆಯ ಆವರಣದಲ್ಲಿ ನಮ್ಮ ಕಚೇರಿ ಇದ್ದು, ನಮ್ಮ ಅಧೀನದಲ್ಲೇ ಕಾರ್ಯ ನಿರ್ವಹಿಸುತ್ತಿರುತ್ತದೆ. ಇದಲ್ಲದೇ ಹೊನ್ನಳ್ಳಿಯ ಸಂತೆ ಮೈದಾನದ ಹತ್ತಿರ ಇರುವ ಕಟ್ಟಡ ಕಾಮಿಕರ ಕಚೇರಿಯನ್ನು ಹೊರತುಪಡಿಸಿದರೆ ಇನ್ನಾವುದೇ ನಮ್ಮ ಸಂಘಟನೆಯ ಕಚೇರಿಗಳು ದಾವಣಗೆರೆ ಜಿಲ್ಲೆಯಲ್ಲಿ ಇರುವುದಿಲ್ಲ ಎಂದು ಮಾಹಿತಿ ನೀಡಿದ್ದಾರೆ.

ಆದರೆ ಕೆಲವು ಸಂಘಟನೆಯವರು ನಮ್ಮ ಸಂಘಟನೆಯ ಹೆಸರು ಹೇಳಿಕೊಂಡು ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗೆ ಬಳಕೆಯಾಗುವ ಅಂಗಡಿಗಳಿಗೆ ತೆರಳಿ ಪ್ರತಿ ಅಂಗಡಿಯಿಂದ ಇಂತಿಷ್ಟು ದೇಣಿಗೆ ನೀಡುವಂತೆ ಒತ್ತಾಯ ಮಾಡುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ಕಾರಣ ಜಿಲ್ಲೆಯ ಕಟ್ಟಡ ಮತ್ತು ಇತರೆ ನಿರ್ಮಾಣ ಹಾಗೂ ಬಣ್ಣದ ಅಂಗಡಿಗಳಿಗೆ ತಿಳಿಸುವುದೇನೆಂದರೆ ನಮ್ಮ ಕಟ್ಟಡ ಕಟ್ಟುವ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘಟನೆಯಿಂದ ಯಾರ ಬಳಿಯೂ ಸಹಾಯಾರ್ಥ ಹಣವಾಗಲೀ, ದೇಣಿಗೆಯಾಗಲೀ ಕೇಳಿರುವುದಿಲ್ಲ. ಕೇಳುವುದೂ ಇಲ್ಲ ಎಂದು ಅಂಗಡಿ ಮಾಲೀಕರ ಗಮನಕ್ಕೆ ತಂದಿದ್ದಾರೆ.ಕಾರಣ ಯಾವುದೇ ಕಟ್ಟಡ ಕಾರ್ಮಿಕರ ಸಂಘಟನೆಯ ಹೆಸರನ್ನು ಹೇಳಿಕೊಂಡು ಬಂದು ದೇಣಿಗೆ ಸಂಗ್ರಹ ಮಾಡಲು ಬಂದರೆ ನಮ್ಮ ಸಂಘಟನೆಯ ಪದಾಧಿಕಾರಿಗಳಿಗೆ ತಿಳಿಸಬೇಕು. ಇಲ್ಲವೇ ನಮ್ಮ ಸಂಘದ ಕಚೇರಿಗೆ ಲಿಖಿತವಾಗಿ ತಿಳಿಸಿದರೆ, ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದು ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ತಿಳಿಸುತ್ತೇವೆ ಎಂದು ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘದ ರಾಜಾಧ್ಯಕ್ಷ ಆವರಗೆರೆ ಹೆಚ್.ಜಿ.ಉಮೇಶ್, ದಾವಣಗೆರೆ ಜಿಲ್ಲಾಧ್ಯಕ್ಷ ವಿ.ಲಕ್ಷ್ಮಣ್ ತಿಳಿಸಿದ್ದಾರೆ.

## ಟೇಕ್ವಾಂಡೋದಲ್ಲಿ ಬಾಲಕನ ಸಾಧನೆ




» ಚಿತ್ರದುರ್ಗ

ಎರಡು ವರ್ಷದ ಬಾಲಕ ಪ್ರಣವ್ ಅಭ್ಯಂತ್ ಆರ್.ಎಸ್. ಟೇಕ್ವಾಂಡೋದಲ್ಲಿ ವರ್ಲ್ಡ್ ಬುಕ್ ರೆಕಾರ್ಡ್ ಮಾಡಿ ಸಾಧನೆಗೈದಿದ್ದಾರೆ. ಟೇಕ್ವಾಂಡೋ ಕೋಚ್ ದಂಪತಿಗಳಾದ ಚಿತ್ರದುರ್ಗದ ರುದ್ರೇಶ್ ಮತ್ತು ಸವಿತ ಇವರ ಪುತ್ರ ಪ್ರಣವ್ ಅಭ್ಯಂತ್ ಆರ್.ಎಸ್. ಚಿಕ್ಕವಯಸ್ಸಿನಲ್ಲಿಯೆ ಇಂಡಿಯನ್ ಬುಕ್ ಆಫ್ ರೆಕಾರ್ಡ್‌ನಲ್ಲಿ ದಾಖಲೆ ನಿರ್ಮಿಸಿ ಒಂದು ನಿಮಿಷಕ್ಕೆ 36 ಕಿಕ್ ಹೊಡೆದು ಇತ್ತೀಚೆಗೆ ವರ್ಲ್ಡ್ ಬುಕ್ ಆಫ್ ರೆಕಾರ್ಡ್‌ನ್ನು ತನ್ನದಾಗಿಸಿಕೊಂಡು ಟೇಕ್ವಾಂಡೋದಲ್ಲಿ ರಾಜ್ಯ ಹಾಗೂ ದೇಶಕ್ಕೆ ಕೀರ್ತಿ ತಂದಿದ್ದಾರೆ.

## 19ರಂದು ಅಖಂಡ ಕರ್ನಾಟಕ ರೈತ ಸಂಘದಿಂದ ಸಮಾಲೋಚನಾ ಸಭೆ

» ಚಳ್ಳಕೆರೆ

ಅಖಂಡ ಕರ್ನಾಟಕ ರೈತ ಸಂಘ ನಿರಂತರವಾಗಿ ರೈತರ ಸರ್ವತೋಮುಖ ಅಭಿವೃದ್ಧಿಗಾಗಿ ಅನೇಕ ಹೋರಾಟಗಳ ಮೂಲಕ ಕಾರ್ಯನಿರ್ವಹಿಸುತ್ತಾ ಬಂದಿದೆ. ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಹಾಗೂ ಮುಂದಿನ ಹೋರಾಟದ ಬಗ್ಗೆ ಚರ್ಚೆ ನಡೆಸಲು ಡಿ.19ರ ಗುರುವಾರ ಬೆಳಗ್ಗೆ 11ಕ್ಕೆ ಪರಶುರಾಮಪುರದ ಜಯಣ್ಣನಗರದ ಸಮುದಾಯ ಭವನದಲ್ಲಿ ಸಮಾಲೋಚನಾ ಸಭೆ ಕರೆಯಲಾಗಿದೆ ಎಂದು ರೈತ ಸಂಘದ ಪ್ರಮುಖ ಗಿರೀಶ್ ತಿಳಿಸಿದ್ದಾರೆ. ಅವರು ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಸಭೆಯ ಅಧ್ಯಕ್ಷತೆಯನ್ನು ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಸೋಮಗುದ್ದುರಂಗಸ್ವಾಮಿ ವಹಿಸಲಿದ್ದು, ರೈತರ ಹೋರಾಟದ ಬಗ್ಗೆ ಮಾರ್ಗದರ್ಶನ ನೀಡುವರು.

## ಪ್ರವಾಸೋದ್ಯಮ, ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ

» ದಾವಣಗೆರೆ

ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ, ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ಫುಡ್‌ಕ್ರಾಫ್ಟ್ ಇನ್ಸ್‌ಟ್ಯೂಟ್(ಎಫ್‌ಸಿಐ) ಮೈಸೂರು ಮತ್ತು ಇನ್ಸ್‌ಟ್ಯೂಟ್ ಆಫ್ ಹೋಟೆಲ್ ಮ್ಯಾನೇಂಜ್‌ಮೆಂಟ್(ಐಹೆಚ್‌ಎಂ) ಬೆಂಗಳೂರು ಇವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ರೈಲ್ವೆ ನಿಲ್ದಾಣ ಪಕ್ಕ ದಾವಣಗೆರೆ ಇಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಡಿ.28 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192–230123 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಜಿಲ್ಲಾಮಟ್ಟದ ಸ್ವೀಪ್ ಸ್ಪರ್ಧೆಗಳು ಕಾರ್ಯಕ್ರಮದಲ್ಲಿ ಡಿಡಿಪಿಐ ಎಂ.ಆರ್.ಮಂಜುನಾಥ್

# ಪ್ರಜಾಪ್ರಭುತ್ವ ಯಶಸ್ವಿಗೆ ಯುವ ಮತದಾರರ ಪಾತ್ರ ಬಹುಮುಖ್ಯ

» ಚಿತ್ರದುರ್ಗ

ಪ್ರಜಾಪ್ರಭುತ್ವದ ಯಶಸ್ವಿಗೆ ಯುವ ಮತದಾರರ ಪಾತ್ರ ಪ್ರಮುಖವಾದುದು. ಪ್ರತಿಯೊಬ್ಬ ಯುವ ಮತದಾರರು ಮತದಾನದಿಂದ ವಂಚಿತರಾಗಬಾರದು. ಪ್ರಜಾಪ್ರಭುತ್ವದ ಯಶಸ್ಸು ಯುವ ಮತದಾರರ ಕೈಯಲ್ಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್ ಹೇಳಿದರು.

ನಗರದ ಗಾರೆಹಟ್ಟಿ ಬೃಹನ್ಮಠ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿ ಮತ್ತು ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಜಿಲ್ಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ಜಿಲ್ಲಾ ಮಟ್ಟದ ಸ್ವೀಪ್ ಸ್ಪರ್ಧೆಗಳು–2024 25 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಭಾರತೀಯ ಚುನಾವಣಾ ಆಯೋಗದ ಆಶಯ ಶೇ.100ರಷ್ಟು ಮತದಾನವಾಗಬೇಕು. ಎಲ್ಲಾ ಮತದಾರರು ತಪ್ಪದೆ ಚುನಾವಣೆಯಲ್ಲಿ ಮತದಾನ ಮಾಡಲು ಜಾಗೃತಿಗಾಗಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸುಮಾ ಮಾತನಾಡಿ, ರಾಷ್ಟ್ರೀಯ ಮತದಾರರ ದಿನದ ಪ್ರಯುಕ್ತ ಸ್ಪರ್ಧೆಗಳನ್ನು ಏರ್ಪಡಿಸಿದ್ದು, 2025ರ ಜನವರಿ 25ರಂದು ಜಿಲ್ಲಾಡಳಿತ ಬಹುಮಾನಗಳನ್ನು ವಿತರಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಚೇರಿಯ ವಿಷಯ ಪರಿವೀಕ್ಷಕ ಮತ್ತು ನೋಡಲ್ ಅಧಿಕಾರಿ ಕೆ.ಜಿ.ಪ್ರಶಾಂತ್, ವಿಷಯ ಪರಿವೀಕ್ಷಕರಾದ ಚಂದ್ರಣ್ಣ, ಗೋವಿಂದಪ್ಪ, ಮಹಲಿಂಗಪ್ಪ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಶ್ರೀನಿವಾಸ, ಬೃಹನ್ಮಠ ಶಾಲೆಯ ಮುಖ್ಯ ಶಿಕ್ಷಕಿ ಅಶಾರಾಣಿ, ಆಂಗ್ಲ ಭಾಷೆ ಶಿಕ್ಷಕರಾದ ಸಿದ್ದೇಶ್, ತೀರ್ಪುಗಾರರು ಮತ್ತು ವಿದ್ಯಾರ್ಥಿಗಳು, ಶಿಕ್ಷಕರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಡಿ.18 ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

» ದಾವಣಗೆರೆ

ಮಾಯಕೊಂಡ, ದಾವಣಗೆರೆ 66ಕೆ.ವಿ. ಯರಗುಂಟೆ, ಅತ್ತಿಗೆರೆ, ಮೆಳ್ಳೆಕಟ್ಟೆ ಮತ್ತು ಕಾಡಜ್ಜಿ ವಿದ್ಯುತ್ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಡಿಸೆಂಬರ್ 18 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಮಾಮಾಸ್ ಜಾಯಿಂಟ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶಾಮನೂರು ರಸ್ತೆ, ಎಸ್.ಎಸ್. ಲೇಔಟ್, ಎ.ಬ್ಲಾಕ್, ಕುವೆಂಪು ನಗರ, ಬಾಟ್ಲಿಬಿಲ್ಡಿಂಗ್ ಸುತ್ತಮುತ್ತ,ಸಿದ್ದವೀರಪ್ಪಬಡಾವಣೆ, 1ನೇ ಅಡ್ಡ ರಸ್ತೆ ಯಿಂದ 7ನೇ ಅಡ್ಡರಸ್ತೆವರೆಗೆ, ಗ್ಲಾಸ್ ಹೌಸ್, ಬಾಪೂಜಿ ಬ್ಯಾಂಕ್ ಸಮುದಾಯ ಭವನದ ಹಿಂಭಾಗದ ಪ್ರದೇಶ , ಬಿ.ಐ.ಇ.ಟಿ. ಕಾಲೇಜು ಹಾಗೂ ಸುತ್ತ ಮುತ್ತ ಪ್ರದೇಶಗಳು, ಮಂಡಿಪೇಟೆ, ಬಿನ್ನಿ ಕಂಪನಿ ರಸ್ತೆ, ಎಂಜಿ ರಸ್ತೆ, ಎನ್ ಆರ್ ರಸ್ತೆ, ಬೆಳ್ಳೂಡಿಗಲ್ಲಿ, ಮಹಾವೀರ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಮಂಡಕ್ಕಿ ಭಟ್ಟಿ, 1 ರಿಂದ 10 ನೇ ಕ್ರಾಸ್, ಇಂದಿರಾ ನಗರ, ಸಿದ್ದರಾಮೇಶ್ವರ ಬಡಾವಣೆ, ಕಾರ್ಲ್ ಮಾರ್ಸ್ ನಗರ, ಕೋಳಿ ಚನ್ನಪ್ಪ ಬಡಾವಣೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು, ಹೆಚ್.ಕೆ. ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸಬಡಾವಣೆ, ಮೌನೇಶ್ವರ ಬಡಾವಣೆ, ಸೈಯದ್ ಪೀರ್ ಬಡಾವಣೆ, ಐ.ಟಿ.ಐ. ರಿಂಗ್ ರಸ್ತೆ, ಜಯನಗರ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಭಗೀರಥ ಸರ್ಕಲ್, ಕಾಳಿಕಾಂಬ ದೇವಸ್ಥಾನ, ಶಕ್ತಿನಗರ, ಹಾಗೂ ಇ.ಎಸ್.ಐ ಆಸ್ಪತ್ರೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು, ಪಿ.ಬಿ. ರಸ್ತೆ., ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಶ್ರೀ ಮುರಘ ರಾಜೇಂದ್ರ ಸ್ವಾಮಿಗಳ ಮಠ, ಜಾಧವ್ ಕ್ಲಿನಿಕ್ ಸುತ್ತ ಮುತ್ತ , ಶಿವಪ್ಪ ವೃತ್ತದಿಂದ ಜಯದೇವ ವೃತ್ತದವರೆಗೆ ಹಾಗು ಸುತ್ತಮುತ್ತ ಪ್ರದೇಶಗಳು ಪೊಲೀಸ್ ಕ್ವಾಟ್ರಸ್, ತುಂಗ, ಭದ್ರ, ಸರಸ್ವತಿ, ಕೃಷ್ಣ ಬ್ಲಾಕ್, ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಂ.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂದಿರ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಸ್.ಎಸ್. ಬಡಾವಣೆ ಎ ಬ್ಲಾಕ್, ಶಾಂತಿನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮೀ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗು ಸುತ್ತಮುತ್ತ ಪ್ರದೇಶಗಳು. ಪಿ.ಬಿ ರೋಡ್, ರಿಲಯನ್ಸ್ ಮಾರ್ಕೆಟ್, ಸುಲ್ತಾನ್‌ಡೈಮೈಂಡ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು, ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸಬಡಾವಣೆ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು, ಡೆಂಟಲ್‌ಕಾಲೇಜ್ ರಸ್ತೆ, ಮ್ಯಾಕ್ಸ್, ಕೆಎಸ್‌ಪಿ, ಕಡ್ಲಿ ಬಿಲ್ಡಿಂಗ್, ಬಿಎಸ್‌ಸಿ, ಎಆರ್‌ಜಿ ಕಾಲೇಜ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, ನಿಜಲಿಂಗಪ್ಪ ಬಡಾವಣೆ, ರಿಂಗ್‌ರೋಡ್, ಕುಂದವಾಡ ರಸ್ತೆ, ಯಲ್ಲಮ್ಮನಗರ, ವಿನೋಬನಗರ 4ನೇ ಮೇನ್, 3ನೇ ಮೇನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, ಎ.ವಿ.ಕೆ ಕಾಲೇಜ್ ರಸ್ತೆ, ರತ್ನಮ್ಮ ಮಹಿಳಾ ಹಾಸ್ಟೆಲ್, ಸೀತಮ್ಮ ಕಾಲೇಜ್ ಮತ್ತು ಬಡಾವಣೆ ಪೊಲೀಸ್ ಠಾಣೆ, ಹದಡಿ ರೋಡ್ ಹಾಗೂ ಸುತ್ತ ಮುತ್ತ ಪ್ರದೇಶಗಳು, ಎಂ.ಬಿ. ಕೇರಿ, ಹೊಂಡದ ಸರ್ಕಲ್, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇ.ಡಬ್ಲ್ಯೂ.ಎಸ್. ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, 17 ಎಫ್-19 ಇಎಸ್‌ಐ: ಇ.ಎಸ್.ಐ ಆಸ್ಪತ್ರೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು, ಶಕ್ತಿನಗರ, ಬನಶಂಕರಿ ದೇವಸ್ಥಾನದ ಸುತ್ತಮುತ್ತ, ರಾಜೇಂದ್ರ ಬಡಾವಣೆ, ಮೀನು ಮಾರುಕಟ್ಟೆ, ಜೋಗಲ್ ಬಾಬಾ ಲೇ ಔಟ್, ಮುಸ್ತಾಫಾ ನಗರ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು,

ಕರೂರು ಇಂಡಸ್ಟ್ರಿಯಲ್ ಏರಿಯಾ, ಡಿ.ಸಿ. ಕಛೇರಿ, ಜಿ.ಎಂ.ಐ.ಟಿ. ಬಸವೇಶ್ವರ ನಗರ, ಹರಿಹರ ರಸ್ತೆ, ವಿಜಯನಗರ, ಅಶೋಕನಗರ, ಆರ್.ಟಿ.ಓ. ಕಛೇರಿ, ಎಸ್.ಪಿ. ಕಛೇರಿ, ರಿಂಗ್ ರಸ್ತೆ, ಶಿಬಾರ, ಎಸ್.ಎಂ.ಕೆ. ನಗರ, ಹಾಗೂ ಚಿತ್ತನಹಳ್ಳಿ, ಕಕ್ಕರಗೊಳ್ಳ, ಆವರಗೊಳ್ಳ, ನೀಲನಹಳ್ಳಿ, ದೇವರಹಟ್ಟಿ, ದೊಡ್ಡಬಾತಿ, ಹಳೆಬಾತಿ, ನಾರಾಯಣ ಕ್ಯಾಂಪ್, ಯರಗುಂಟಾ, ಕೋಡಿಹಳ್ಳಿ, ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು

ಅತ್ತಿಗೆರೆ, ಕುರ್ಕಿ, ಬಾಡ, ಕಬ್ಬೂರು, ಹೀರೆತೊಗಲೇರಿ, ಗೋಪಾನಾಳು, ಕಂದ್ಗಲ್, ರಾಮಗೊಂಡನಹಳ್ಳಿ, ಕಾಶೀಪುರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ದಿಂಡದಹಳ್ಳಿ, ನರಗನಹಳ್ಳಿ, ಮಾಯಕೊಂಡ, ಬೊಮ್ಮೆನಹಳ್ಳಿ, ಬಾವಿಹಾಳು, ಬುಳ್ಳಾಪುರ, ಕೊಡಗನೂರು, ನಲ್ಕುಂದ, ಬಸಾಪುರ, ಅಣಬೇರು ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ಆಲೂರು, ಬಿ.ಜಿ.ಹಳ್ಳಿ, ಸಿದ್ದನೂರು, ಮಲ್ಲಾಪುರ, ಗುಡಾಳು, ಅಣಜಿ, ಕಿತ್ತೂರು, ಕಂದನಕೋವಿ, ಮೆಳ್ಳೆಕಟ್ಟೆ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ರೆಡ್ಡಿ ಕ್ಯಾಂಪ್, ಪುಟಗಾನಾಳು, ಶ್ರಿರಾಮನಗರ, ಕಾಡಜ್ಜಿ, ಬಸವಾನಾಳು, ನಾಗರಕಟ್ಟೆ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು

### ಆಯ್ಕೆ ಸಮಿತಿ ಸಭೆ


» ದಾವಣಗೆರೆ

ಪ್ರಸಕ್ತ ಸಾಲಿನ ವಿವಿಧ ನಿಗಮಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿ ಸಭೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಸುರೇಶ್.ಬಿ.ಇಟ್ನಾಳ್ ಇವರ ಅಧ್ಯಕ್ಷತೆಯಲ್ಲಿ ಡಿ.19 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

# ನಾಟ್ಯ ರಂಜನಿ ಕೇಂದ್ರದ ರಜತ ಮಹೋತ್ಸವ

» ಚಿತ್ರದುರ್ಗ

ಕಲೆ, ಸಾಹಿತ್ಯ, ನಾಟ್ಯಗಳು ನಶಿಸಿ ಹೋಗುತ್ತಿರುವ ಇಂದಿನ ಆಧುನಿಕ ಕಾಲದಲ್ಲಿ ನಾಟ್ಯ ರಂಜನಿ ನೃತ್ಯ ಕಲಾ ಕೇಂದ್ರ ಕಳೆದ 25 ವರ್ಷಗಳಿಂದಲೂ ಕಲೆಯನ್ನು ಉಳಿಸಿ ಬೆಳೆಸುವ ಕೆಲಸ ಮಾಡುತ್ತಿರುವುದು ಸ್ತುತ್ಯಾರ್ಹ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದರು.





ನಾಟ್ಯ ರಂಜನಿ ನೃತ್ಯ ಕಲಾ ಕೇಂದ್ರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ತ.ರಾ.ಸು.ರಂಗಮಂದಿರದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ಕಲಾ ಕೇಂದ್ರದ ರಜತ ಮಹೋತ್ಸವದ ನಾಟ್ಯ ರಂಜನಿ ನೃತ್ಯ ಹಬ್ಬ-2024 ಉದ್ಘಾಟಿಸಿ ಮಾತನಾಡಿದರು.

ಮೊಬೈಲ್, ಟಿ.ವಿ. ಹಾವಳಿಗಳ ನಡುವೆ ಭಾರತೀಯ ಸಂಸ್ಕೃತಿ ನಾಟ್ಯ ಕಲೆಯನ್ನು ರಕ್ಷಿಸಿದರೆ ಕಲಾವಿದರು ಉಳಿಯುತ್ತಾರೆ. ಇದಕ್ಕಾಗಿ ಸರ್ಕಾರದ ವತಿಯಿಂದ ನಮ್ಮ ಪ್ರೋತ್ಸಾಹವಿರುತ್ತದೆ. ಎಲ್ಲಿಯಾದರೂ ಸಿ.ಎ. ಸೈಟ್‌ಗಳಿದ್ದರೆ ಮಕ್ಕಳ ತರಬೇತಿಗೆ ಅವಕಾಶ ಮಾಡಿಕೊಡುವುದಾಗಿ ಅಪರ ಜಿಲ್ಲಾಧಿಕಾರಿ ಭರವಸೆ ನೀಡಿದರು.

ಕ್ಷೇತ್ರಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ ಕೋಟೆ ನಾಡು ಚಿತ್ರದುರ್ಗದಲ್ಲಿ ರಾಜರು ಕೇವಲ ಆಳ್ವಿಕೆ ನಡೆಸಿರುವುದಷ್ಟೆ ಅಲ್ಲ. ಕಲೆ, ಸಾಹಿತ್ಯ, ನಾಟ್ಯ, ಸಂಸ್ಕೃತಿಗೂ ಅವಕಾಶವಿತ್ತು. ನಾಟ್ಯ ರಂಜನಿ ಕಲಾ ಕೇಂದ್ರದ ಕಿರಣ್‌ರವರು ಕಳೆದ ಇಪ್ಪತ್ತೈದು ವರ್ಷಗಳಿಂದಲೂ ಅಮೋಘವಾದ ಕಾರ್ಯಕ್ರಮ ಆಯೋಜಿಸಿಕೊಂಡು ಬರುತ್ತ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ತರುವ ಕೆಲಸ ಮಾಡುತ್ತಿದ್ದಾರೆ. ಇಲ್ಲಿ ತರಬೇತಿ ಪಡೆದಿರುವ ಮಕ್ಕಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಹೆಸರು ಪಡೆದಿದ್ದಾರೆ. ಇಲಾಖೆ ಹಾಗೂ ಜಿಲ್ಲಾಡಳಿತದ ವತಿಯಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುವುದೆಂದರು.

ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಕಾರ್ಯಾಧ್ಯಕ್ಷ ಆರ್.ಮಂಜುನಾಥ್ ಮಾತನಾಡುತ್ತ ನಾಟ್ಯ ರಂಜನಿ ನೃತ್ಯ ಕಲಾ ಕೇಂದ್ರದ ಜೆ.ಕಿರಣ್‌ರವರು ಇಪ್ಪತ್ತೈದು ವರ್ಷಗಳಿಂದ ಪ್ರತಿ ವರ್ಷವೂ ನಾಟ್ಯ ರಂಜನಿ ಹಬ್ಬವನ್ನು ಆಚರಿಸಿಕೊಂಡು ಬರುತ್ತಿರುವುದರ ಹಿಂದೆ ಅಪಾರ ಪರಿಶ್ರಮವಿದೆ. ಮಕ್ಕಳಿಗೆ ನಾಟ್ಯ ತರಬೇತಿ ನೀಡಲುನಿರ್ಧಿಷ್ಟವಾಧನೆಲೆಯಿಲ್ಲ.ಹಾಗಾಗಿ ಸರ್ಕಾರದ ವತಿಯಿಂದ ಎಲ್ಲಿಯಾದರೂ ಜಾಗದ ಅವಕಾಶ ಮಾಡಿಕೊಡುವಂತೆ ಜಿಲ್ಲಾಡಳಿತವನ್ನು ಕೋರಿದರು.

ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಆಯುಕ್ತೆ ಎಲ್.ಸವಿತಾ ಶಿವಕುಮಾರ್ ಮಾತನಾಡಿ ಕಲಾವಿದರ ಸ್ಥಿತಿ ಶೋಚನೀಯವಾಗಿದೆ. ಕಲೆ ಮತ್ತು ಕಲಾವಿದರು ಉಳಿಯಬೇಕಾಗಿರುವುದರಿಂದ ಸರ್ಕಾರ ಎಲ್ಲಾ ರೀತಿಯ ನೆರವು ನೀಡಬೇಕೆಂದು ಮನವಿ ಮಾಡಿದರು.

ಇಬ್ಬರು ಮೃದಂಗ ಬಡ ಕಲಾವಿದರನ್ನು ಸನ್ಮಾನಿಸಿ ಮಾತನಾಡಿದ ನಾಟ್ಯ ರಂಜನಿ ನೃತ್ಯ ಕಲಾ ಕೇಂದ್ರದ ಜೆ.ಕಿರಣ್ ಕಲಾವಿದರ ಬದುಕು ಶೋಚನೀಯವಾಗಿದೆ. ಸರ್ಕಾರದಿಂದ ಯಾವುದೇ ರೀತಿಯ ನೆರವು ಸಿಗುತ್ತಿಲ್ಲ. ಬಡ ಕಲಾವಿದರು ವೃದ್ದಾಪ್ಯ ಕಾಲದಲ್ಲಿ ನೆಮ್ಮದಿಯಾಗಿ ಬದುಕಬೇಕಾದರೆ ಸರ್ಕಾರ ಸೌಲಭ್ಯಗಳನ್ನು ನೀಡಬೇಕೆಂದು ಅಪರ ಜಿಲ್ಲಾಧಿಕಾರಿಯವರಲ್ಲಿ ವಿನಂತಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕನಿರ್ದೇಶಕಬಿ.ಎಂ.ಗುರುನಾಥ್, ಕ್ರಿಯೇಟಿವ್ ಸ್ಟುಡಿಯೋ ಚಿತ್ರಕಲಾವಿದ ಟಿ.ಎಂ.ವೀರೇಶ್ ವೇದಿಕೆಯಲ್ಲಿದ್ದರು.

ಕನ್ನಡದ ಖ್ಯಾತ ಭಾವಗೀತೆಗಳ ಆಧಾರಿತ ವಿಶೇಷ ನೃತ್ಯ ರೂಪಕ ರಾಧ-ಕೃಷ್ಣರ ವಿರಹಗಾತೆ, ಶಿವನ ಸಪ್ತ ತಾಂಡವಗಳ ನೃತ್ಯ ರೂಪಕ ನವಶಕ್ತಿ ವೈಭವ ನಾಟ್ಯಗಳು ಪ್ರದರ್ಶನಗೊಂಡವು.

# ಚೆಲುಮೆರುದ್ರಸ್ವಾಮಿ ಸನ್ನಿಧಿಯಲ್ಲಿ ಕಾರ್ತಿಕ ದೀಪೋತ್ಸವ

## ಧಾರ್ಮಿಕ ನೆಲೆಗಟ್ಟಲನ್ನು ಗಟ್ಟಿಗೊಳಿಸಲು ಬಸವಣ್ಣನವರ ತತ್ವಾದರ್ಶಗಳು ಸ್ಫೂರ್ತಿ: ಡಾ.ಬಸವಕುಮಾರಸ್ವಾಮಿ





» ಚಳ್ಳಕೆರೆ

ತಾಲ್ಲೂಕಿನ ಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೆಲುಮೆರುದ್ರಸ್ವಾಮಿ ಸನ್ನಿಧಿಯಲ್ಲಿ ಕಡೆಕಾರ್ತಿಕ ದೀಪೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಚಿತ್ರದುರ್ಗದ ಶ್ರೀಮುರುಘರಾಜೇಂದ್ರಬೃಹನ್ಮಠ ಹಾಗೂ ಎಸ್‌ಜೆಎಂ ವಿದ್ಯಾಪೀಠದ ಆಡಳಿತಮಂಡಳಿ ನಿರ್ದೇಶಕ ರಾದ ಡಾ.ಬಸವಕುಮಾರಸ್ವಾಮಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಳೆದ ಹಲವಾರು ದಶಕಗಳಿಂದ ನಾಡಿನ ಕಲ್ಯಾಣಕ್ಕಾಗಿ ಬಸವಾದಿಶರಣರು, ಶ್ರೇಷ್ಠಮುನಿಗಳು ತಮ್ಮೆಲ್ಲಾ ಕೆಲಸಕಾರ್ಯಗಳನ್ನು ಬದಿಗೊತ್ತಿ ಸಮಾಜದ ಹಿತಕ್ಕಾಗಿ ಎಲ್ಲವನ್ನು ತ್ಯಾಗಮಾಡಿ ಧಾರ್ಮಿಕ ಭಾವನೆಗಳು ಎಲ್ಲರಲ್ಲೂ ಜಾಗೃತರಾಗುವಂತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದ್ದಾರೆ. ಅಂತಹ ಶ್ರೇಷ್ಠದಲ್ಲಿ ಶ್ರೀಚೆಲುಮೆರುದ್ರಸ್ವಾಮಿಯೂ ಸಹ ಒಬ್ಬರು.

ಚೆಲುಮೆರುದ್ರಸ್ವಾಮೀಜಿಯವರು ನಿರಂತರ ಧರ್ಮಪ್ರಚಾರದಿಂದ ಎಲ್ಲರ ಮನಸ್ಸು ಗೆದಿದ್ದಾರೆ, ಪ್ರತಿಯೊಬ್ಬರನ್ನೂ ಮಠಕ್ಕೆ ಆಹ್ವಾನಿಸಿ ಬಸವೇಶ್ವರ ತತ್ವಾದರ್ಶಗಳ ಬಗ್ಗೆ ಜಾಗೃತಿ ಮೂಡಿಸಿದ್ದಾರೆ. ಸಮಾಜ ಮತ್ತು ಸ್ವಾಮೀಜಿ ನಡುವೆ ಯಾವುದೇ ಅಂತರವಿಲ್ಲದೆ ಧಾರ್ಮಿಕ ವಿಚಾರಧಾರೆಗಳನ್ನು ನಿರಂತರವಾಗಿ ಎಲ್ಲರಲ್ಲೂ ಹರಡುವಲ್ಲಿ ಯಶಸ್ವಿಯಾಗಿದ್ದಾರೆ. ಇಂತಹ ಪುಣ್ಯ ನೆಲದಲ್ಲಿ ನೆಲೆಸಿ ಎಲ್ಲರಿಗೂ ಒಳಿತು ಬಯಸಿರುವ ಚೆಲುಮೆರುದ್ರಸ್ವಾಮಿಪೀಠ ಭಕ್ತಾಧಿಗಳಲ್ಲಿ ಆತ್ಮವಿಶ್ವಾಸಮೂಡಿಸುವಲ್ಲಿ ಯಶಸ್ವಿಯಾಗಿದೆ ಎಂದರು. ಟ್ರಸ್ಟ್ ಸಮಿತಿ ಉಪಾಧ್ಯಕ್ಷ ಓಬಣ್ಣ, ಕಾರ್ಯದರ್ಶಿ ಅಶೋಕ್, ಖಜಾಂಚಿಗಳಾದ ತಿಪ್ಪಣ್ಣ, ರವಿಚಂದ್ರ, ಸದಸ್ಯರಾದ ಸಂತೋಷ್, ಮಂಜುನಾಥ, ಟಿ.ಚಲ್ಮೇಶ್, ರಾಜೇಶ್‌ರೆಡ್ಡಿ, ರಾಜಣ್ಣ, ಲೋಕೇಶ್, ತಿರುಮಲೇಶ್, ಮಹೇಶ್ ಮುಂತಾದವರು ಉಪಸ್ಥಿತರಿದ್ದರು.

# ರಾತ್ರಿ 1 ಗಂಟೆವರೆಗೂ ಅಧಿವೇಶನ: ದಶಕದ ಬಳಿಕ ದಾಖಲೆ

» ಬೆಳಗಾವಿ

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ವಿಧಾನಸಭೆ ಅಧಿವೇಶನ ಸೋಮವಾರ ವಿಶೇಷ ಸನ್ನಿವೇಶವೇಶಕ್ಕೆ ಸಾಕ್ಷಿಯಾಯಿತು. ಸುಮಾರು 15 ಗಂಟೆಗಳ ಕಾಲ, ಅಂದರೆ ಬೆಳಗ್ಗೆ 10 ಗಂಟೆಗೆ ಆರಂಭವಾಗಿ ರಾತ್ರಿ 12.55 ರ ವರೆಗೂ ವಿಧಾನಸಭೆಯಲ್ಲಿ ಗಮನ ಸೆಳೆಯುವ ಸೂಚನಾ ಕಲಾಪ ನಡೆದಿದೆ. ಕಳೆದೊಂದು ದಶಕದಲ್ಲೇ ಇದು ವಿಶೇಷ ದಾಖಲೆಯ ಕಲಾಪವಾಗಿದೆ.ನಮಗೆ ಅವಕಾಶ ಕೊಡಿ, ಸಮಯವಾಯಿತು ಎಂದು ಕೆಲ ಶಾಸಕರು ಆಗ್ರಹಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ಸ್ಪೀಕರ್ ಯುಟಿ ಖಾದರ್, ವಿಶ್ವಕಪ್ ಕ್ರಿಕೆಟ್ ನೋಡುವಾಗ ರಾತ್ರಿ 3 ಗಂಟೆಯವರೆಗೆ ಕಾಯುವುದಿಲ್ಲವೇ? ಅದೇ ರೀತಿ ಈಗ ವಿಶ್ವಕಪ್ ಅಂದುಕೊಂಡು ಸಹಕಾರ ಕೊಡಿ ಎಂದರು. ಮಧ್ಯರಾತ್ರಿ ಆದರೂ ತಮ್ಮ ಗಮನ ಸೆಳೆಯುವ ಸೂಚನೆಗೆ ಸಚಿವರ ಉತ್ತರ ಪಡೆಯಲು ರಾಯಚೂರು ಜಿಲ್ಲೆಯ ದೇವದುರ್ಗ ಶಾಸಕಿ ಕರೆಮ್ಮ ನಾಯ್ಕ್ ಹಾಜರಿದ್ದರು.

ತಮ್ಮ ಸರದಿ ಬಂದಾಗ ಇಂಡಿ ಶಾಸಕ ಯಶವಂತರಾಯಗೌಡ, ಕರೆಮ್ಮ ಅವ್ರು ಬಹಳ ಹೊತ್ತಿನಿಂದ ಇದ್ದಾರೆ. ಅವರಿಗೆ ಉತ್ತರ ಕೊಟ್ಟು ಕಳುಹಿಸಿ ಎಂದು ಮನವಿ ಮಾಡಿದರು. ಬೆಳಗ್ಗೆ 10 ಗಂಟೆಗೆ ಕಲಾಪ ಮುಂದೂಡಿದ ವೇಳೆ, ಸದನದಲ್ಲಿ ಸ್ಪೀಕರ್ ಮತ್ತು ಡೆಪ್ಯುಟಿ ಸ್ಪೀಕರ್ ಮೂವರು ಸಚಿವರು, 7 ಕಾಂಗ್ರೆಸ್ ಶಾಸಕರು, 4 ಜೆಡಿಎಸ್ ಶಾಸಕರು, ಓರ್ವ ಬಿಜೆಪಿ ಶಾಸಕ ಮತ್ತು 1 ಪಕ್ಷೇತರ ಶಾಸಕ ಹಾಜರಿದ್ದರು.

ಮಧ್ಯರಾತ್ರಿವರೆಗೂ ನಡೆದ ವಿಧಾನಸಭೆ ಕಲಾಪದ ಕುರಿತು ಮಾತನಾಡಿದ ಸಭಾಧ್ಯಕ್ಷ ಯುಟಿ ಖಾದರ್, ಇದು ಕಳೆದ 10 ವರ್ಷಗಳಲ್ಲೇ ದಾಖಲೆಯ ಕಲಾಪ ಎಂದರು. ಸಚಿವ ಸತೀಶ್ ಜಾರಕಿಹೊಳಿ ಕೂಡ, ಇದೊಂದು ವಿಶೇಷ ಘಳಿಗೆ ಎಂದು ಬಣ್ಣಿಸಿದ್ದಾರೆ. ಶಾಸಕಿ ಕರೆಮ್ಮ ಮಧ್ಯರಾತ್ರಿವರೆಗೂ ಉಪಸ್ಥಿತರಿದ್ದು, ಚರ್ಚೆಯಲ್ಲಿ ಪಾಲ್ಗೊಂಡಿದ್ದು ಶ್ಲಾಘನೀಯ ಎಂದು ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅಂದಹಾಗೆ, ಇಷ್ಟೊಂದು ಸುದೀರ್ಘ ಅವಧಿ ಕಲಾಪ ನಡೆದಿದ್ದು ಇದೇ ಮೊದಲು ಏನಲ್ಲ. ಈ ಹಿಂದೆ ಕೆಜಿ ಬೋಪಯ್ಯ ಸ್ಪೀಕರ್ ಆಗಿದ್ದಾಗ ಮಧ್ಯರಾತ್ರಿ 1.45 ರ ವರೆಗೆ ಕಲಾಪ ನಡೆದಿತ್ತು

### ಅರ್ಜಿ ಆಹ್ವಾನ

ದಾವಣಗೆರೆ : ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ದೇವದಾಸಿ ಪುನರ್ ವಸತಿ ಯೋಜನೆಯಡಿ ನಿವೇಶನ ಹೊಂದಿದ ಅರ್ಹ ಮಾಜಿ ದೇವದಾಸಿ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಉಪಯೋಜನೆಯಡಿ ಬಳಕೆಯಾಗದ ಅನುದಾನದಡಿ ಜಿಲ್ಲೆಗೆ ಭೌತಿಕ 19, ಆರ್ಥಿಕ ರೂ.34 ಲಕ್ಷಗಳ ಗುರಿ ಸೇರಿದಂತೆ ಒಟ್ಟು 67 ಭೌತಿಕ ಗುರಿ ನಿಗದಿಪಡಿಸಿದ್ದು, ಗ್ರಾಮೀಣ ಪ್ರದೇಶದ ಘಟಕ ವೆಚ್ಚ ರೂ.1.75 ಲಕ್ಷ ಹಾಗೂ ನಗರ ಪ್ರದೇಶದ ರೂ.2 ಲಕ್ಷಗಳ ಘಟಕ ವೆಚ್ಚದಲ್ಲಿ ರಾಜೀವಗಾಂಧಿ ವಸತಿ ನಿಗಮದಿಂದ ವಸತಿ ಸೌಲಭ್ಯವನ್ನು ಒದಗಿಸಲಾಗುವುದು. ಅರ್ಹರು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 14ನೇ ಮುಖ್ಯ ರಸ್ತೆ, ಕುವೆಂಪು ನಗರ, ದಾವಣಗೆರೆ ಇಲ್ಲಿ ಅರ್ಜಿಗಳನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ 1 ಜನವರಿ 2025 ರೊಳಗೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08192-222117 ಗೆ ಸಂಪರ್ಕಿಸಲು ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

### ಪ್ರಾದೇಶಿಕ ಸಾರಿಗೆ ಶಿಬಿರ

ದಾವಣಗೆರೆ: 2025ನೇ ವರ್ಷದಲ್ಲಿ ದಾವಣಗೆರೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ವತಿಯಿಂದ ಶಿಬಿರಗಳನ್ನು ಆಯೋಜಿಸಲಾಗಿದೆ. ಪ್ರತಿ ತಿಂಗಳು 5 ನೇ ತಾರೀಖಿನಂದು ಮಲೇಬೆನ್ನೂರಿನ ನೀರಾವರಿ ಇಲಾಖೆಯ ಸಬ್ ಡಿವಿಜನ್ ಕಚೇರಿ ಆವರಣ ಮತ್ತು ಹರಿಹರದ ಎ.ಪಿ.ಎಂ.ಸಿ ಆವರಣ. ಪ್ರತಿ ತಿಂಗಳು 10ನೇ ತಾರೀಖಿನಂದು ಚನ್ನಗಿರಿ ಎ.ಪಿ.ಎಂ.ಸಿ ಆವರಣ, ಪ್ರತಿ ತಿಂಗಳು 20ನೇ ತಾರೀಖಿನಂದು ಜಗಳೂರು ಎ.ಪಿ.ಎಂ.ಸಿ ಆವರಣ. ಪ್ರತಿ ತಿಂಗಳು 23ನೇ ತಾರೀಖಿನಂದು ನ್ಯಾಮತಿ ಮತ್ತು ಹೊನ್ನಾಳಿ ಎ.ಪಿ.ಎಂ.ಸಿ ಆವರಣದಲ್ಲಿ ಸಾರಿಗೆ ಶಿಬಿರಗಳನ್ನು ನಡೆಸಲಾಗುವುದು ಎಂದು ಸಾರಿಗೆ ಅಧಿಕಾರಿ ಸಿ.ಎಸ್ ಪ್ರಮುತೇಶ್ ತಿಳಿಸಿದ್ದಾರೆ.

### ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ದಾವಣಗೆರೆ : ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನೈರ್ಮಲ್ಯ ಶೌಚಾಲಯಗಳು ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕುರಿತು ನವಂಬರ್ 1 ರಿಂದ 15 ರ ಅವಧಿಯಲ್ಲಿ ದಾವಣಗೆರೆ ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಕರು ಹಾಗೂ ಕಿರಿಯ, ಸಹಾಯಕ ಅಭಿಯಂತರರು (ಒಳಚರಂಡಿ) ಇವರುಗಳಿಂದ ಸಮೀಕ್ಷೆ ಕಾರ್ಯ ನಿರ್ವಹಿಸಲಾಗಿರುತ್ತದೆ. ಯಾವುದೇ ಅನೈರ್ಮಲ್ಯ ಶೌಚಾಲಯಗಳು ಕಂಡು ಬಂದಿರುವುದಿಲ್ಲ. ಹಾಗೂ ಸಮೀಕ್ಷೆ ಅವಧಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳೆಂದು 149 ಸ್ವಯಂ ಘೋಷಣಾ ಅರ್ಜಿಗಳು ಸ್ವೀಕೃತವಾಗಿದ್ದು, ಸ್ಥಳ ಪರಿಶೀಲಿಸಲಾಗಿ, ಈ ಅರ್ಜಿದಾರರು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯದಲ್ಲಿ ತೊಡಗಿರದ ಕಾರಣ ಈ ಅರ್ಜಿಗಳು ತಿರಸ್ಕೃತಗೊಂಡಿದ್ದು, ಸ್ವೀಕೃತ ಅರ್ಜಿಗಳ ಪಟ್ಟಿಯನ್ನು ಮಹಾನಗರ ಪಾಲಿಕೆಯ ಆರೋಗ್ಯ ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಡಿ.26 ರೊಳಗೆ ಪೂರಕ ದಾಖಲೆಗಳೊಂದಿಗೆ ಆಯುಕ್ತರು, ದಾವಣಗೆರೆ ಮಹಾನಗರ ಪಾಲಿಕೆ ಸಲ್ಲಿಸಬೇಕೆಂದು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಜೀವನ ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲ

» ಶ್ರೀ ರಂಭಾಪುರಿ ಪೀಠ (ಬಾಳೆಹೊನ್ನೂರು)

ಮನುಷ್ಯನಿಗೆ ಬದುಕಿನಲ್ಲಿ ಭರವಸೆ ಮತ್ತು ಕನಸುಗಳು ಇರಬೇಕು. ಧರ್ಮ ಮತ್ತು ಸಂಸ್ಕೃತಿಯ ಆದರ್ಶಗಳನ್ನು ಅನುಸರಿಸಿ ಬಾಳಿದರೆ ಜೀವನದಲ್ಲಿ ಶ್ರೇಯಸ್ಸು ನಿಶ್ಚಿತ. ಜೀವನ ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳುತ್ತದೆ

ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಶ್ರೀ ರಂಭಾಪುರಿ ಪೀಠದಲ್ಲಿ ಜರುಗಿದ ಲಿಂ.ಶ್ರೀ ರಂಭಾಪುರಿ ವೀರರುದ್ರಮುನಿ ಜಗದ್ಗುರುಗಳವರ ಜನ್ಮ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಜೀವನದಲ್ಲಿ ಉನ್ನತಿ ಸಾಧಿಸಬೇಕಾದರೆ ಜನಬಲ ಹಣಬಲ ತೋಳ್ಬಲ ಇದ್ದರೆ ಸಾಲದು. ಅದರೊಂದಿಗೆ ದೈವ ಬಲವೂ ಮುಖ್ಯ. ಆಶಾವಾದಿ ಕಷ್ಟ ಕಾಲದಲ್ಲೂ ಅವಕಾಶವನ್ನು ಹುಡುಕುತ್ತಾನೆ. ಕಲಿತ ಮನುಷ್ಯ ಮರೆಯಲು ಸಾಧ್ಯವಾಗುವುದಿಲ್ಲ. ವೀರಶೈವ ಧರ್ಮ ಸಂಸ್ಕೃತಿಯನ್ನು ಬೆಳೆಸುವ ನಿಟ್ಟಿನಲ್ಲಿ ಲಿಂ.ಶ್ರೀ ಜಗದ್ಗುರು ವೀರರುದ್ರಮುನಿ ಶಿವಾಚಾರ್ಯ ಭಗವತ್ಪಾದರು ಶ್ರಮಿಸಿದ್ದನ್ನು ಎಂದಿಗೂ ಮರೆಯಲಾಗದು. ರಚನಾತ್ಮಕ ಗುಣಾತ್ಮಕ ಸತ್ಕಾರ್ಯಗಳಿಂದ ಎಲ್ಲರ ಮನ ಮಂದಿರಗಳಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ. ವ್ಯಕ್ತಿಯನ್ನು ನೋಡಿ ಮಾಡುವ ಸ್ನೇಹಕ್ಕಿಂತ ವ್ಯಕ್ತಿತ್ವವನ್ನು ನೋಡಿ ಮಾಡುವ ಸ್ನೇಹ ದೊಡ್ಡದೆಂದು ಭಕ್ತ ಸಮುದಾಯಕ್ಕೆ ಬೋಧಿಸುತ್ತಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯರಿಂದ ಬೋಧಿಸಲ್ಪಟ್ಟ ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದ ಸಾರವನ್ನು ಭಕ್ತ ಸಂಕುಲಕ್ಕೆ ಮನವರಿಕೆ ಮಾಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ಅವರು ಬದುಕಿ ಬಾಳಿದ್ದರೆ ಇಂದಿಗೆ ನೂರು ವರುಷ ಪರಿಪೂರ್ಣವಾಗುತ್ತಿತ್ತು. ಆದರೆ ಭಗವಂತ ತನಗೆ ಬೇಕೆಂದು ಎತ್ತಿಕೊಂಡ. ಅವರ ಜನ್ಮ ಶತಮಾನೋತ್ಸವ ಶ್ರೀ ರಂಭಾಪುರಿ ಪೀಠದಲ್ಲಿವಿದ್ಯುಕ್ತವಾಗಿಆಚರಿಸುತ್ತಿರುವುದು ತಮಗೆ ಸಂತೋಷ ತಂದಿದೆ. ಅವರ ಜೀವನಾದರ್ಶಗಳನೊಳಗೊಂಡ ಜೀವನ ಚರಿತ್ರೆ "ಧರ್ಮ ಚೇತನ" ನಾಮಾಂಕಿತದಲ್ಲಿ ಕೃತಿಯೊಂದು ಬಿಡುಗಡೆಗೊಳ್ಳುತ್ತಿರುವುದು ತಮಗೆ ತೃಪ್ತಿಯನ್ನು ತಂದಿದೆ. ಮುಂದಿನ ಆರು ತಿಂಗಳು ವಿವಿಧ ಸಮಾರಂಭಗಳಲ್ಲಿ ಶ್ರೀ ರುದ್ರಮುನಿ ಜಗದ್ಗುರುಗಳ ಜನ್ಮ ಶತಮಾನೋತ್ಸವ ಆಚರಿಸಲಾಗುವುದು. ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿಗಳಾದ ಸಿ.ಎಚ್.ಬಾಳನಗೌಡರು ಮೂರು ದಶಕಕಕ್ಕೂ ಮಿಕ್ಕಿ ಶ್ರೀ ಪೀಠದ ಆದರ್ಶ ಚಿಂತನಗಳನ್ನು ಮಾಧ್ಯಮದವರಿಗೆ ಕಳಿಸುವ ಬಹು ದೊಡ್ಡ ಕಾರ್ಯ ಮಾಡುತ್ತಿದ್ದಾರೆ. ಇದೇ ಅಪೂರ್ವ ಸಂದರ್ಭದಲ್ಲಿ ಅವರ ಜನ್ಮ ಅಮೃತ ಮಹೋತ್ಸವ ಆಚರಿಸುತ್ತಿರುವುದು ಹಾಗೂ ಅವರ ಜೀವನ ಯಶೋಗಾಥೆ ಸಾರುವ "ಬಾಳ ಹೊಂಗಿರಣ" ಕೃತಿ ಪ್ರಕಟಗೊಳ್ಳುತ್ತಿರುವುದು ತಮಗೆ ಅತ್ಯಂತ ಸಂತೋಷವನ್ನು ಉಂಟು ಮಾಡಿದೆ. ಇದೇ ಸಂದರ್ಭದಲ್ಲಿ ಅವರಿಗೆ "ವಾರ್ತಾ ಸೇವಾ ಸಂಜೀವಿನಿ" ಪ್ರಶಸ್ತಿ ಕೊಟ್ಟು ಆಶೀರ್ವದಿಸಿರುವುದು ತಮಗೆ ಸಂತೋಷ ತಂದಿದೆ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀ ಹಿಮವತ್ಕೇದಾರ ಜಗದ್ಗುರು ರಾವಲ್ ಪದವಿ ಭೂಷಿತ ಭೀಮಾಶಂಕರ ಶಿವಾಚಾರ್ಯ ಭಗವತ್ಪಾದರು ತಮ್ಮ ಆಶೀರ್ವಚನದಲ್ಲಿ ಮಾನವ ಧರ್ಮದ ಹಿರಿಮೆ ಮತ್ತು ಗುರುಸ್ಥಲದ ಉತ್ಕೃಷ್ಠ ವಿಚಾರ ಧಾರೆಗಳನ್ನು ನಿರಂತರ ಬೋಧಿಸಿ ಸಮಾಜಕ್ಕೆ ದಿಕ್ಸೂಚಿಯಾದ ಲಿಂ. ಶ್ರೀ ಜಗದ್ಗುರು ರುದ್ರಮುನಿ ಶಿವಾಚಾರ್ಯ ಭಗವತ್ಪಾದರ ಬಾಳ ಬದುಕು ಶ್ರೇಯಸ್ಸು ಬಯಸುವ ಮನುಷ್ಯನಿಗೆ ದಾರಿ ದೀಪವಾಗಿದೆ.



# ಆಧುನಿಕ ಭಾರತದಲ್ಲಿ ಸ್ತ್ರೀವಾದ ಮತ್ತು ಶಿಕ್ಷಣ

ಸ್ತ್ರೀವಾದ ಅಥವಾ ಫೆಮಿನಿಸಂ ಎಂಬುದು ಒಂದು ಸಾಮಾಜಿಕ ಹಾಗೂ ರಾಜಕೀಯ ಸಿದ್ಧಾಂತ. ಇದು ಪಾಶ್ಚಾತ್ಯ ನೆಲದಲ್ಲಿ ಮೂಡಿಬಂದದ್ದಾದರೂ ಜಗತ್ತಿನೆಲ್ಲೆಡೆಗೂ ಹಬ್ಬಿ ಪ್ರಚಲಿತದಲ್ಲಿರುವ ಸಿದ್ಧಾಂತವಾಗಿದೆ. ಇದು ಹೋರಾಟದ ಹಿನ್ನೆಲೆ ಹೊಂದಿರುವ ಸಿದ್ಧಾಂತ. ಮಹಿಳಾ ಸಮಸ್ಯೆಗಳು ಹಾಗೂ ಮಹಿಳೆಯರನ್ನು ಈ ಸಮಸ್ಯೆಗಳಿಂದ ವಿಮೋಚನೆಗೊಳಿಸುವುದೇ ಈ ಹೋರಾಟದ ಮೂಲ ಉದ್ದೇಶ. ಇತ್ತೀಚಿನವರೆವಿಗೂ ಸ್ತ್ರೀ ಪುರುಷರ ನಡುವೆ ಲಿಂಗಾಧಾರಿತ ತಾರತಮ್ಯವಿರುವ ವ್ಯವಸ್ಥೆ ಇತ್ತು. ಈ ವ್ಯವಸ್ಥೆಯಲ್ಲಿ ಸುಧಾರಣೆಯನ್ನು ತರಲು ನಡೆಸುವ ಹಕ್ಕೊತ್ತಾಯ, ರಾಜಕೀಯ, ಆರ್ಥಿಕ ಹಾಗೂ ಸಾಮಾಜಿಕ ಬದುಕಿನ ನೆಲೆಗಳಲ್ಲಿ ಸ್ತ್ರೀಪುರುಷರನ್ನು ಸಮಾನವಾಗಿ ಸ್ಥಾಪಿಸಬಲ್ಲ ವ್ಯವಸ್ಥೆಗಾಗಿ ನಡೆಸುವ ಹೋರಾಟ – ಇವುಗಳ ಹಿಂದಿರುವ ತಾತ್ವಿಕ ನೆಲೆಗಟ್ಟನ್ನು ಸ್ತ್ರೀವಾದ ಎನ್ನಬಹುದು.

ಮಹಿಳೆಯರು ತಮ್ಮ ಸ್ಥಾನಮಾನ ಹಾಗೂ ಹಕ್ಕುಗಳಿಗಾಗಿ ಯುರೋಪ್ ಖಂಡದ ಜರ್ಮನಿ, ನೆದರ್‌ಲ್ಯಾಂಡ್ಸ್, ಫ್ರಾನ್ಸ್ , ಇಟಲಿ ಮತ್ತು ಸ್ಕ್ಯಾಂಡಿನೇವಿಯಾ ದೇಶಗಳಲ್ಲಿ ಹೋರಾಟ ಮಾಡಿದರು. ಈ ಹೋರಾಟ ಇತರ ಅನೇಕ ದೇಶಗಳಲ್ಲಿ, ಮುಖ್ಯವಾಗಿ ಬ್ರಿಟನ್ ಮತ್ತು ಉತ್ತರ ಅಮೆರಿಕಾದ ಸಂಯುಕ್ತ ಸಂಸ್ಥಾನಗಳಲ್ಲಿಯೂ ನಡೆಯಿತು. ಈ ಎಲ್ಲ ಕಡೆಗಳಲ್ಲಿ ಆಯಾದೇಶದ ಸಾಂಸ್ಕೃತಿಕ ಹಿನ್ನೆಲೆಗೆ ಅನುಗುಣವಾಗಿ ನಡೆದ ಈ ಹೋರಾಟಕ್ಕೆ ಇನ್ನೂರು ವರ್ಷಗಳಿಗೂ ಹೆಚ್ಚಿನ ಇತಿಹಾಸವಿದೆ. ವರ್ಷಗಳು ಕಳೆದಂತೆ ಈ ಹೋರಾಟಗಳು ಹೆಚ್ಚು ಶಕ್ತಿಯುತವಾಗುತ್ತಿವೆ. ಹೋರಾಟದ ತೀವ್ರತೆ ಹೆಚ್ಚಿದೆ. ಜೊತೆಗೆ ಸಮಸ್ಯೆಗಳು ಕೂಡಾ ಭಿನ್ನರೂಪವನ್ನು ಪಡೆಯುತ್ತಾ ಬಂದಿವೆ. ಸ್ತ್ರೀವಾದಿ ಸಂಘಟನೆಗಳು ಅಭಿಪ್ರಾಯಪಡುವಂತೆ ಲಿಂಗಭೇದ ನೀತಿಯಿಂದ ಮಹಿಳೆಯರ ಅನೇಕ ಸಮಸ್ಯೆಗಳು ಉದ್ಭವಿಸಿವೆ. ಮಹಿಳೆ ಅಥವಾ ಪುರುಷರ ನಡುವೆ ಸಹಜವಾದ ಕೆಲವು ಜೈವಿಕ ವ್ಯತ್ಯಾಸಗಳಿವೆ. ಈ ವ್ಯತ್ಯಾಸಗಳು ಯಾವುದೇ ರೀತಿಯಲ್ಲಿ ಪುರುಷನನ್ನು ಶ್ರೇಷ್ಠವೆಂದೂ ಸ್ತ್ರೀಯನ್ನು ಕೀಳೆಂದು ಪ್ರಮಾಣೀಕರಿಸುವುದಿಲ್ಲ.

ಭಾರತದಲ್ಲಿ ಲಿಂಗ ಸಮಾನತೆಯ ಪರಿಕಲ್ಪನೆ ಪರಿಚಯವಾಗಿದ್ದು 19 ನೆಯ ಶತಮಾನದಲ್ಲಿ. ಭಾರತೀಯರು ಪಾಶ್ಚಿಮಾತ್ಯ ಶಿಕ್ಷಣವನ್ನು ಪಡೆಯಲು ಪ್ರಾರಂಭಿಸಿದಾಗ. ಭಾರತವು ಸ್ವಾತಂತ್ರ್ಯ ಪಡೆದ ನಂತರ ಸಂವಿಧಾನಾತ್ಮಕವಾಗಿ ಸಮಾನತೆಗೆ ಒತ್ತು ನೀಡಿತು. ಸರಕಾರವು ಸಮಾನತೆ ಲಿಂಗತ್ವ ಹಾಗೂ ಧಾರ್ಮಿಕ ನೆಲೆಯ ಭೇದಭಾವಗಳನ್ನು ಹೋಗಲಾಡಿಸುವ ಕಾನೂನು ಜಾರಿಗೆ ತಂದಿತು. ಏಳು ಪಂಚವಾರ್ಷಿಕ ಯೋಜನೆಗಳು ಮಹಿಳೆಯರಿಗೆ ಆರೋಗ್ಯ, ಶಿಕ್ಷಣ, ಉದ್ಯೋಗ ಹಾಗೂ ಅಭಿವೃದ್ಧಿಗೆ ಒತ್ತುಕೊಟ್ಟರೆ ಎಂಟನೆಯ ಪಂಚವಾರ್ಷಿಕ ಯೋಜನೆಯು ಮಹಿಳೆಯರನ್ನು ಅಭಿವೃದ್ಧಿಯಲ್ಲಿ ಪಾಲುದಾರರು ಎಂದು ಘೋಷಿಸಿತು. ಇಲ್ಲಿ ಮತ್ತೆ ಗಮನಿಸಬೇಕಾದ ಮುಖ್ಯ ಅಂಶವೆಂದರೆ ಭಾರತೀಯ ಸ್ತ್ರೀವಾದಕ್ಕೂ ಪಾಶ್ಚಾತ್ಯ ಸ್ತ್ರೀವಾದಕ್ಕೂ ಇರುವ ವ್ಯತ್ಯಾಸ. ಭಾರತೀಯ ವಾತಾವರಣದಲ್ಲಿ ಮಾನವಹಕ್ಕುಗಳ ನೆಲೆಯಲ್ಲಿ ಭಾರತೀಯ ಮಹಿಳೆ ಹಾಗೂ ಸ್ತ್ರೀವಾದವನ್ನು ಅರ್ಥಮಾಡಿಕೊಳ್ಳಬೇಕಾಗುತ್ತದೆ. ಉದಾಹರಣೆಗೆ ಹಸಿವು , ಬಡತನ , ಅನಾರೋಗ್ಯ , ಶಿಶುಮರಣ, ಭೂಮಾಲೀಕರು ಮಹಿಳಾ ಕಾರ್ಮಿಕರ ದೈಹಿಕ ಶ್ರಮವನ್ನು ಉಪಯೋಗಿಸುವುದು, ಸಂಪ್ರದಾಯಗಳ ಅಮಾನವೀಯತೆ ಮತ್ತು ಹೊರೆ ಕಟ್ಟುಕಟ್ಟಳೆಗಳ





ಕೊನೆಯಿಲ್ಲದ ಬೇಡಿಕೆ ಅಥವಾ ಕಾರಣವಿಲ್ಲದೆ ತೆಗಳಿಕೆ, ಹೀಗಳೆತ, ಹೊಡೆತ ಇವೆಲ್ಲವುಗಳ ಬಗ್ಗೆ ಭಾರತೀಯರ ಹಾಗೂ ಪಾಶ್ಚಿಮಾತ್ಯರ ಗ್ರಹಿಕೆ ಭಿನ್ನವಾಗಿದೆ.


ಕಾನೂನು ಕಟ್ಟಳೆಗಳ ನೆಲೆಯಲ್ಲಿ ಭಾರತೀಯ ಮಹಿಳೆಯರ ಸ್ಥಿತಿಗತಿ ಉತ್ತಮವಾಗಿದೆ ಎಂದು ಕಂಡುಬಂದರೂ ವಾಸ್ತವದಲ್ಲಿ ಹಾಗಿಲ್ಲ. ಮಹಿಳೆಯರಿಗೆ ನೀಡಿರುವ ಸವಲತ್ತುಗಳು ಪೂರ್ಣಪ್ರಮಾಣದಲ್ಲಿ ಅವರನ್ನು ತಲುಪಿಲ್ಲ. ನೂರಾರು ವರ್ಷಗಳಿಂದ ಪಾಲಿಸುತ್ತ ಬಂದಿರುವ ಕೆಲವು ಕಟ್ಟಳೆಗಳು ಆಚರಿಸುತ್ತಿರುವ ಸಂಪ್ರದಾಯಗಳು ಭಾರತೀಯರ ಜೀವನದಲ್ಲಿ ಹಾಸುಹೊಕ್ಕಾಗಿ ಸೇರಿಕೊಂಡುಬಿಟ್ಟಿವೆ. ಧಾರ್ಮಿಕ ಕಾನೂನುಗಳು ಮತ್ತು ನಿರೀಕ್ಷೆಗಳು ಅಥವಾ ವೈಯಕ್ತಿಕ ಕಾನೂನುಗಳು (ಪ್ರತಿ ಧರ್ಮದಿಂದ ಮೂಡಿಬಂದವುಗಳು) ಭಾರತೀಯ ಸಂವಿಧಾನಾತ್ಮಕ ಕಾನೂನುಗಳಿಗೆ ಪೂರಕವಾಗಿಲ್ಲದ ಕಾರಣ ಮಹಿಳೆಯರಿಗೆ ಕಾನೂನುಬದ್ಧವಾಗಿ ದೊರಕಬೇಕಾದ ಹಕ್ಕುಗಳು ಹಾಗೂ ಅಧಿಕಾರ ಲಭ್ಯವಾಗುತ್ತಿಲ್ಲ! ಹೀಗಾದಾಗ್ಯೂ ಭಾರತ ಸರಕಾರ ಧಾರ್ಮಿಕ ಅಥವಾ ವೈಯಕ್ತಿಕ ಕಾನೂನುಗಳಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ.

ಆಧುನೀಕರಣ ಪ್ರಕ್ರಿಯೆಗೆ ಒಳಗಾದ ಭಾರತಕ್ಕೆ ಆಧುನಿಕ ಮೌಲ್ಯಗಳು ರೂಢಿಯಾದವು. ಆಧುನಿಕ ಅಭಿವೃದ್ಧಿಯ ದುಡಿಮೆ ವಲಯವು ಸಂಪೂರ್ಣವಾಗಿ ಪುರುಷರಿಗೆ ಮೀಸಲಿದ್ದು ಪುರುಷಕೇಂದ್ರಿತವಾಯಿತು. ಇಲ್ಲಿ ಸ್ತ್ರೀ ಪುರುಷರ ನಡುವಿನ ವಿಭಜನೆ ಸ್ಪಷ್ಟವಾಗಿ ಕಾಣುತ್ತದೆ. ದೇಶದ ಅಭಿವೃದ್ಧಿ ಸಾಮಾಜಿಕ ಜೀವನದ ಪಾಲುದಾರಿಕೆ ಹಾಗೂ ಉತ್ಪಾದನಾ ಕಾರ್ಯಗಳು ಪುರುಷರಿಗೆ ಸೀಮಿತವಾದ ವಲಯವಾಗಿದ್ದು ವಂಶಾಭಿವೃದ್ಧಿ , ಕುಟುಂಬದ ಲಾಲನೆ, ಪಾಲನೆ ಇವುಗಳು ಮಹಿಳೆಯ ಜವಾಬ್ದಾರಿ ವಲಯವಾಯಿತು. ಶಿಕ್ಷಣ ಕ್ಷೇತ್ರವೂ ತನ್ನ ನೀತಿ ಹಾಗೂ ಪಠ್ಯಕ್ರಮಗಳಲ್ಲಿ ಇದೇ ಮೌಲ್ಯವನ್ನು ಎತ್ತಿ ಹಿಡಿಯಿತು. ಈ ರೀತಿಯಲ್ಲಿ ಸ್ಪಷ್ಟ ವಿಭಜನೆಗೆ ಮನ್ನಣೆ ನೀಡಿತು. ಶಿಕ್ಷಣದ ಈ ಧೋರಣೆ ಮತ್ತು ಕ್ರಮಗಳು ಸ್ತ್ರೀವಾದಿ ನಿಲುವಿನ ವಿರೋಧ ದಿಕ್ಕಿನಲ್ಲಿ ನಡೆಯಿತು. ಆದರೆ ಇತ್ತೀಚಿನ ದಿನಗಳಲ್ಲಿ ಶಿಕ್ಷಣದಲ್ಲಿ ಕೆಲವಾದರೂ ಪರಿಣಾಮಕಾರಿಯಾದ ಬದಲಾವಣೆಗಳನ್ನು ಕಾಣುತ್ತಿದ್ದೇವೆ.

ವಸಾಹತುಶಾಹಿ ಆಡಳಿತವು ಭಾರತವನ್ನು ಆಧುನೀಕರಣದ ಪ್ರಕ್ರಿಯೆಗೆ ಒಳಪಡಿಸುವುದರ ಜೊತೆಜೊತೆಯಲ್ಲಿಯೇ ಜಾಗತಿಕ ಮಾರುಕಟ್ಟೆಗೂ ಪರಿಚಯಿಸಿತು. ಬಂಡವಾಳಶಾಹಿಯು ಸಮಾಜದಲ್ಲಿ ತರುವ ಬದಲಾವಣೆಗಳು ಅತಂತ್ರತೆ ಇತ್ಯಾದಿಗಳು ಮನುಷ್ಯಜೀವನವನ್ನು ಸಾಕಷ್ಟು ಒತ್ತಡಕ್ಕೆ ದೂಡುವುದರ ಜೊತೆಗೆ ಮನುಷ್ಯನ ವ್ಯಕ್ತಿತ್ವವನ್ನು ಸಂಕೀರ್ಣಗೊಳಿಸುತ್ತದೆ. ಹಾಗಾಗಿ ಸಮಾಜದ ಮೌಲ್ಯಗಳು, ಜೀವನಕ್ರಮ, ಸಂಸ್ಕೃತಿ ಇವುಗಳೂ ಬದಲಾವಣೆಯನ್ನು ಹೊಂದುತ್ತವೆ. ಸ್ವಾಭಾವಿಕವಾಗಿಯೇ ಈ ಬದಲಾವಣೆಗಳು ಶಿಕ್ಷಣ ಕ್ಷೇತ್ರಕ್ಕೂ ವಿಸ್ತರಿಸುತ್ತವೆ. ಭಾರತದ ಸನ್ನಿವೇಶದಲ್ಲಿಯೂ ಇದು ನಿಜವಾಯಿತು. ಬಂಡವಾಳಶಾಹಿ ಸಮಾಜದಲ್ಲಿ ಹೆಚ್ಚಿನ ದುಡಿಮೆಯಿದೆ. ಮಹಿಳೆಯರು ಉದ್ಯಮವಲಯವನ್ನು ಪ್ರವೇಶಿಸುವಂತಾಯಿತು. ಪುರುಷರಿಗೆ ಮಾತ್ರ ಮೀಸಲಿದ್ದ ಈ ಕ್ಷೇತ್ರಕ್ಕೆ ಮಹಿಳೆಯರನ್ನು ಪಾಲುದಾರರನ್ನಾಗಿ ಮಾಡಲು ಎರಡು ಮುಖ್ಯ ಕಾರಣಗಳಿದ್ದವು. ಮೊದಲನೆಯದು, ಮಹಿಳೆಯರು ಮನೆಯೊಳಗಿದ್ದುಕೊಂಡೇ ಕೆಲಸವನ್ನು ಮಾಡುವುದು. ಎರಡನೆಯದು, ಕಡಿಮೆ ವೇತನಕ್ಕೆ ಅವರಿಂದ ಹೆಚ್ಚು ಕೆಲಸವನ್ನು ಮಾಡಿಸಲು ಸಾಧ್ಯವಿರುವುದು.

ಒಳ್ಳೆಯ ಮಗಳು, ಒಳ್ಳೆಯ ಹೆಂಡತಿ, ಒಳ್ಳೆಯ ತಾಯಿ ಎಂದೆಲ್ಲಾ ಹೇಳಿಸಿಕೊಳ್ಳುತ್ತಾ ಬೆಳೆದ ಸಂಸ್ಕೃತಿಯ ಮಹಿಳೆಗೆ ಒಳ್ಳೆಯ ಕೆಲಸಗಾರ್ತಿ ಎಂಬ ಬಿರುದಿನೊಂದಿಗೆ ಅಲ್ಪ ಸಂಬಳದ ಚಕಾರವೆತ್ತುವ ದಾರ್ಷ್ಟ್ಯ ಸ್ವಭಾವವಿಲ್ಲದಿರುವುದು ಉದ್ಯೋಗದಾತರಿಗೆ ಅನುಕೂಲವೇ ಆಗಿತ್ತು. ಹಾಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರಿಗೆ ಉದ್ಯೋಗ ಅವಕಾಶಗಳು ಮೂಡಿದವು. ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರ ಅವಶ್ಯಕತೆ ಇದ್ದುದರಿಂದ ಮಹಿಳಾ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲಾಯಿತು. ಬಂಡವಾಳಶಾಹಿಗೆ ಅನುಕೂಲಕರವಾಗಿ ಜಾಗತೀಕರಣವು ಮೂಡಿಬಂದಿತು. ಇದು ಮಾರುಕಟ್ಟೆಯ ವ್ಯಾಪ್ತಿಯನ್ನು ಹಿಗ್ಗಿಸಿತು. ಹೂಡಿಕೆ ಹಾಗೂ ಗಳಿಕೆಯೇ ಜಾಗತೀಕರಣದ ಮೂಲ ಉದ್ದೇಶವಾದರೂ ಅನಿವಾರ್ಯವೋ ಏನೋ ಎಂಬಂತೆ ಜನರ ಚಲನೆಯು ಜಗತ್ತಿನಾದ್ಯಂತ ಹರಡಿದುದರ ಫಲವಾಗಿ ಜ್ಞಾನ ಮಾದರಿಯ ಕೊಡುಕೊಳ್ಳುವಿಕೆ ನಿರಂತರವಾಗಿ ನಡೆಯುತ್ತಲೇ ಇದೆ ಎನ್ನಬಹುದು. ಈ ಹಿನ್ನೆಲೆಯಲ್ಲಿ ಶಿಕ್ಷಣದಲ್ಲಿ ಸಾಕಷ್ಟು ಮಾರ್ಪಾಡುಗಳು ಆದವು. ಅಲ್ಲದೆ ಮಹಿಳೆಯರು ಶಿಕ್ಷಣರಂಗಕ್ಕೆ ಕಾಲಿರಿಸುವ ಈ ತಾಣವನ್ನು ಸ್ತ್ರೀವಾದವು ತನ್ನ ಲಾಭಕ್ಕೆ ಸ್ವಲ್ಪಮಟ್ಟಿಗೆ ಬಳಸಿಕೊಂಡಿದೆ ಎನ್ನಬಹುದು.

ಸ್ತ್ರೀವಾದಿ ನೆಲೆಯಲ್ಲಿ ಶಿಕ್ಷಣರಂಗದಲ್ಲಿ ಆದ ಬದಲಾವಣೆಗಳು ಪ್ರಮುಖವಾಗುತ್ತವೆ. ಶಾಲಾಶಿಕ್ಷಣ ಶಿಕ್ಷಣದ ಪ್ರಥಮ ಹಂತ. ಇಂದಿಗೂ ಭಾರತದಲ್ಲಿ ಹೆಣ್ಣುಮಕ್ಕಳಿಗಾಗಿಯೇ ಮೀಸಲಿಟ್ಟ ಶಾಲೆಗಳಿವೆ. ಹಾಗೆಯೇ ಗಂಡುಮಕ್ಕಳಿಗೆಂದೇ ಮೀಸಲಿಟ್ಟ ಶಾಲೆಗಳಿವೆ. ಈ ಬಗೆಯ ಮೀಸಲು ದೃಷ್ಟಿಯೇ ಲಿಂಗತ್ವಭೇದದ ಸೂಚಕವಾಗಿದೆ. ಇನ್ನು ಸಹಶಿಕ್ಷಣವಿರುವ ಶಾಲೆಗಳಲ್ಲಿ ಹೆಣ್ಣು – ಗಂಡು ಎಂಬ ಭೇದದಲ್ಲಿಯೇ ಅನೇಕ ಚಟುವಟಿಕೆಗಳು ನಡೆಯುತ್ತವೆ. ಹಾಗಾಗಿ ಸ್ತ್ರೀಪುರುಷ ಸಮಾನತೆಯ ಅಂಶಗಳು ಶಾಲಾಮಟ್ಟದಲ್ಲಿ ಪ್ರಬಂಧ, ಭಾಷಣಸ್ಪರ್ಧೆಗಳ ವಿಷಯವಾಗಿ ಮಹಿಳಾದಿನಾಚರಣೆಯ ಆಚರಣೆಯ ಮಟ್ಟಕ್ಕೆ ಸೀಮಿತವಾಗಿದೆ. ಪದವಿ ಶಿಕ್ಷಣವು ಶಾಲಾ ಮಟ್ಟಕ್ಕಿಂತಸ್ತ್ರೀವಾದಿನೆಲೆಯಲ್ಲಿಸ್ವಲ್ಪಭಿನ್ನವಾಗಿದೆ. ಕೆಲವು ವಿಶ್ವವಿದ್ಯಾನಿಲಯಗಳು ಸ್ತ್ರೀಸಮಾನತೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಪದವಿ ತರಗತಿಗಳಲ್ಲಿ 'ಲಿಂಗಸಮಾನತೆ' ಯ ವಿಷಯವನ್ನು ಕಡ್ಡಾಯ ವಿಷಯವಾಗಿ ಪಠ್ಯಕ್ರಮದಲ್ಲಿ ಸೇರ್ಪಡೆಗೊಳಿಸಿವೆ. ಸಾಹಿತ್ಯ ವಿಷಯದ ವಿದ್ಯಾರ್ಥಿಗಳು ಸಾಹಿತ್ಯವನ್ನು ಸ್ತ್ರೀವಾದಿ ನೆಲೆಯಲ್ಲಿ ಅಭ್ಯಾಸಿಸುವುದು, ಸ್ತ್ರೀವಾದದ ಅರಿವಿಗೆ ಪುಷ್ಟಿ ನೀಡುತ್ತದೆ. ಲಿಂಗತ್ವ – ಸೂಕ್ಷ್ಮತೆ ಹಾಗೂ ಮಹಿಳಾ ಹಕ್ಕುಗಳ ಬಗ್ಗೆ ಕಾರ್ಯಾಗಾರಗಳನ್ನು ಕಾಲೇಜುಗಳಲ್ಲಿ ನಡೆಸಲಾಗುತ್ತದೆ. ಮಹಿಳೆಯರ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸುವ ಕೆಲವೊಂದು ಕಾರ್ಯಕ್ರಮಗಳು ಈ ಹಂತದಲ್ಲಿ ನಡೆಯುತ್ತವೆ. ಪದವಿ ಮಟ್ಟದ ಎಲ್ಲ ಪ್ರಯತ್ನಗಳೂ ಮಹಿಳೆಯರ ತಾರತಮ್ಯದ ಕುರಿತು ಅರಿವು ಮೂಡಿಸುವುದಕ್ಕೆ ಮಾತ್ರ ಸೀಮಿತವಾಗಿದೆ ಎಂಬ ಅಂಶ ಗಮನಾರ್ಹ. ಸ್ತ್ರೀವಾದವೆನ್ನುವುದು ನಿಂತ ನೀರಾಗದೇ ಚಲನಶೀಲವಾಗಿದೆ. ಆದರೆ ಇಲ್ಲಿ ಒಂದು ಅಂಶವನ್ನು ಗಮನಿಸಬೇಕು ಸ್ತ್ರೀವಾದ ರಾಜಕೀಯ ಸಿದ್ಧಾಂತದ ದೃಷ್ಟಿಯಿಂದ ತನ್ನದೇ ಆದ ಮಿತಿಯನ್ನು ಹೊಂದಿದೆ. ಜಾಗತಿಕ ರಾಜಕೀಯ ಇತಿಮಿತಿಯ ಅರಿವಿದ್ದೇ ಅದು ಮಹಿಳೆಯರ ಸಮಾನತೆಯ ಹಕ್ಕೊತ್ತಾಯ ಹಾಗೂ ಹೋರಾಟವನ್ನು ನಡೆಸಬೇಕಾಗಿದೆ. ಇದು ಸ್ತ್ರೀವಾದದ ಅನಿವಾರ್ಯತೆ ಕೂಡ. ಬಹುಶಃ ಇಲ್ಲಿ ಶಿಕ್ಷಣ ಬಹುಮುಖ್ಯ ಪಾತ್ರವನ್ನು ವಹಿಸಬೇಕಾಗುತ್ತದೆ. ಸ್ತ್ರೀವಾದವು ಕೇವಲ ಮಾಹಿತಿಯಾಗಿ ವಿಷಯ ಪ್ರಸರಣದ ವಸ್ತುವಾಗಿ ಮಾತ್ರ ಶಿಕ್ಷಣದಲ್ಲಿ ಮೂಡಿಬಂದು ಕೇವಲ ಜಡ ಅಥವಾ ತಟಸ್ಥ ಕ್ರಿಯೆಯಾಗಿದೆ. ಶಿಕ್ಷಣವು ವಿದ್ಯಾರ್ಥಿಗಳನ್ನು ಸ್ತ್ರೀವಾದದ ತಾತ್ವಿಕತೆಗೆ ಪ್ರೇರೇಪಿಸುವ ನಿಟ್ಟಿನಲ್ಲಿರಬೇಕಾದ ಅಗತ್ಯವಿದೆ. ಇಲ್ಲವಾದಲ್ಲಿ ಸ್ತ್ರೀವಾದವು ಶಿಕ್ಷಣದಲ್ಲಿ ಕೇವಲ ಮಾಹಿತಿಯಾಗಿ ಉಳಿದು, ಸಮಾಜದಲ್ಲಿ ಸಮಾನತೆಯ ನೆಲೆಯಲ್ಲಿ ಹೆಚ್ಚಿನ ಬದಲಾವಣೆಗಳನ್ನು ತರಲು ಕಷ್ಟಸಾಧ್ಯವಾಗುತ್ತದೆ.



■ ಲೇಖನ
ಟಿ.ಪಿ.ಉಮೇಶ್
ಹೊಳಲ್ಕೆರೆ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T